# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 314 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 08–07–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 314 | Title- Code: KARKAN 28269 | Chitradurga | Date: 08-07-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಭ್ರೂಣ ಲಿಂಗ ಪತ್ತೆ: ಮಾಹಿತಿದಾರರಿಗೆ 1 ಲಕ್ಷರೂ ಬಹುಮಾನ 2
ಅಳಿಸಿ ಹೋಗುವುದನ್ನು ಉಳಿಸುವುದೇ ಸಂಶೋಧನೆಯ ಕೆಲಸವಾಗಬೇಕು 3
ಡೆಂಗ್ಯೂ ನಿಯಂತ್ರಣಕ್ಕೆ ಜನರ ಸಹಕಾರ ಅತ್ಯಗತ್ಯ: ಜಿಲ್ಲಾಧಿಕಾರಿ ವೆಂಕಟೇಶ್ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

ಸೂಕ್ತ ಸ್ಥಳದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಪ್ರಾಮಾಣಿಕ ಪ್ರಯತ್ನ: ಶಾಸಕ

# ಕನ್ನಡ ನಾಡು, ನುಡಿ ಬೆಳೆಸಲು ಪ್ರಾಮಾಣಿಕ ಪ್ರಯತ್ನ: ರಘುಮೂರ್ತಿ

» ಚಳ್ಳಕೆರೆ

ನಾಡು, ನುಡಿ, ಭಾಷೆಯ ಬಗ್ಗೆ ಪ್ರತಿಯೊಬ್ಬರಲ್ಲೂ ಆತ್ಮಾಭಿಮಾನ ಹುಟ್ಟುವ ನಿಟ್ಟಿನಲ್ಲಿ ನಗರದ ಹೃದಯ ಭಾಗದಲ್ಲಿ ಕನ್ನಡ ಭವನ ನಿರ್ಮಾಣಕ್ಕೆಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಶಾಸಕ, ಸಣ್ಣ ಕೈಗಾರಿಕೆಗಳ ಅಭಿವೃದ್ದಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಭರವಸೆ ನೀಡಿದರು.

ಅವರು, ನಗರದ ಗಾಯಿತ್ರಿ ಕಲ್ಯಾಣ ಮಂಟಪದಲ್ಲಿ ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕ ಕಮಲಹಂಪನಾ ಸ್ಮರಣಾರ್ಥ ಆಯೋಜಿಸಿದ್ದ ಕವಿಗೋಷ್ಠಿ ಮತ್ತು ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಕನ್ನಡದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾಡಿದರು.

ಕಳೆದ ಹಲವಾರು ಕಾರ್ಯಕ್ರಮಗಳಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಸಾಹಿತ್ಯ ಪರಿಷತ್ ಪದಾಧಿಕಾರಿಗಳು ಮನವಿ ನೀಡುತ್ತಾ ಬಂದಿದ್ದಾರೆ. ನಾನು ಸಹ ಅದರ ನಿಮಾಣಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುವೆ ನಿಟ್ಟಿನಲ್ಲಿ ಮುಂದಿನ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಕನ್ನಡ ಭವನದಲ್ಲೇ ಮಾಡೋಣ. ನಾಡು ನುಡಿ, ಜಲ, ಭೂಮಿಯ ಬಗ್ಗೆ ಪ್ರತಿಯೊಬ್ಬರು ಎಚ್ಚೆತ್ತುಕೊಳ್ಳಬೇಕಿದೆ. ನಮ್ಮ ತಾಲ್ಲೂಕಿನಲ್ಲೇ ಪ್ರಾಥಮಿಕ ವಿದ್ಯಾಭ್ಯಾಸವನ್ನು ಮುಗಿಸಿದ ನಾಡೋಜ ಕಮಲಹಂಪನಾ ಈ ನಾಡುವ ಅದ್ಬುತ ಲೇಖಕಿ. ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಶಿಕ್ಷಣದ ಜೊತೆಯಲ್ಲಿ ಸಂಸ್ಕಾರವನ್ನು ಕಲಿಸಿ ಸಮಾಜದ ಬಹುಮುಖ ಪ್ರತಿಭೆಯನ್ನಾಗಿ ಮಾಡಬೇಕೆಂದು ಕಿವಿ ಮಾತು ಹೇಳಿದರು.




ಲೇಖಕಿ ಕಮಲಹಂಪನಾರವರ ಬಗ್ಗೆ ಮಾತನಾಡಿದ ನಿವೃತ್ತ ಪ್ರಾಂಶುಪಾಲ ಪ್ರೊ.ಶಿವಲಿಂಗಪ್ಪ, ಪುರುಷ ಪ್ರಧಾನ ಸಮಾಜದಲ್ಲಿ ಮಹಿಳಾ ಸಮುದಾಯಕ್ಕೆ ಭದ್ರ ನೆಲೆಯನ್ನು ಹಾಕಿಕೊಟ್ಟ ಮಹಾನ್ ಚಿಂತಕಿ ಕಮಲಹಂಪನಾ. ಅಂತರಾಷ್ಟ್ರೀಯ ಮಟ್ಟದಲ್ಲಿಸಾಹಿತ್ಯಲೋಕದಸಾಕ್ಷ್ಯಚಿತ್ರವನ್ನು ನಿರ್ಮಾಣ ಮಾಡಿ ಸಾಹಿತ್ಯ ಕ್ಷೇತ್ರದಲ್ಲಿ ಗಟ್ಟಿಯಾಗಿ ನೆಲೆಯೂರಿದವರು. ನಾಡು, ನುಡಿಯ ಬಗ್ಗೆ ತಮ್ಮದೇಯಾದ ಛಾಪು ಉಂಟು ಮಾಡಿದ ಮಹಾನ್ ವ್ಯಕ್ತಿ. ಕನ್ನಡ ಸಾಹಿತ್ಯದ ಹಲವಾರು ಪ್ರಕಾರಗಳನ್ನು ಅದ್ಯಾಯನ ಮಾಡಿ ಮಹಿಳೆರಿಗೆ ಕಟ್ಟಿಯಾದ ಧ್ವನಿಯಾಗಿ ನೆಲೆನಿಂತವರು ಕಮಲಹಂಪನಾ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ ಮಾತನಾಡಿ, ಆಂಧ್ರದ ಗಡಿಭಾಗವಾದ ಚಳ್ಳಕೆರೆ ನಗರದಲ್ಲಿ ಕನ್ನಡ ಭಾಷೆ ಉಳಿಸಿ, ಬೆಳೆಸಲು ಕನ್ನಡ ಭವನದ ಅವಶ್ಯಕತೆ ಇದೆ. ಶಾಸಕರು ಈ ಬಗ್ಗೆ ತುರ್ತಾಗಿ ಗಮನಹರಿಸಬೇಕು. ಕನ್ನಡ ನಾಡು ನುಡಿಯ ಬಗ್ಗೆ ಜನರಲ್ಲಿ ಜಾಗೃತಿ ಉಂಟು ಮಾಡಲು ಸೂಕ್ತ ಕನ್ನಡ ಭವನ ಬೇಕಿದೆ. ಪರಿಷತ್ ನಡೆಸುವ ಎಲ್ಲಾ ಕಾರ್ಯಗಳಿಗೂ ಸೂಕ್ತ ವೇದಿಕೆಯ ಅವಶ್ಯಕತೆ ಇದೆ ಎಂದು ಮನವಿ ಮಾಡಿದರು. ಕನ್ನಡ ಕಾರ್ಯಕ್ರಮ ಕೇವಲ ಒಂದು ವರ್ಗಕ್ಕೆ ಸೀಮಿತವಾಗದೆ ಪ್ರತಿಯೊಂದು ಮನೆ, ಮನೆಯ ಕಾರ್ಯಕ್ರಮವಾಗಿ ರೂಪುಗೊಳ್ಳಬೇಕಿದೆ. ಇದೇ ತಿಂಗಳು 12ರಂದು ನಗರಕ್ಕೆ ಆಗಮಿಸಲಿರುವ ಕನ್ನಡ ರಥವನ್ನು ಅದ್ದೂರಿಯಾಗಿ ಸ್ವಾಗತಿಸಲು ನಿರ್ಧರಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಕನ್ನಡದಲ್ಲಿ ಹೆಚ್ಚು ಅಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ನಿವೃತ್ತ ಪ್ರಾಂಶುಪಾಲ ರಾಮರೆಡ್ಡಿ, ಡಾ.ಬಿ.ವಿ.ರಾಜಣ್ಣ, ಡಾ.ಕೆ.ಚಿತ್ತಯ್ಯ, ಕಸಾಪ ಹೋಬಳಿ ಘಟಕದ ಅಧ್ಯಕ್ಷ ದಯಾನಂದ, ಈರಣ್ಣ, ಕೆಂಚವೀರನಹಳ್ಳಿಮಲ್ಲೇಶ್, ಮಹಂತೇಶ್, ದೊಡ್ಡಯ್ಯ, ಎಚ್. ಮಂಜುನಾಥ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಸ್ವಯಂ ಘೋಷಿತ ಆಸ್ತಿ ತೆರಿಗೆ ಪಾವತಿ: ಜುಲೈ 31 ರವರೆಗೆ ಅವಧಿ ವಿಸ್ತರಣೆ

» ಚಿತ್ರದುರ್ಗ

2024–25ನೇ ಸಾಲಿಗೆ ಸ್ವಯಂ ಘೋಷಿತ ಆಸ್ತಿ ತೆರಿಗೆಯನ್ನು ಇದೇ ಏಪ್ರಿಲ್ ತಿಂಗಳಲ್ಲಿ ಪಾವತಿಸಿದವರಿಗೆ ಸರ್ಕಾರದ ಆದೇಶದ ಅನ್ವಯ ಶೇ.5 ರಷ್ಟು ರಿಯಾಯಿತಿಯನ್ನು ನೀಡಲಾಗುತ್ತಿರುವುದುನ್ನು ಜುಲೈ 31 ರವರೆಗೆ ಅವಧಿ ವಿಸ್ತರಿಸಿ ಆದೇಶಿಸಲಾಗಿದೆ. ಈ ಪ್ರಯುಕ್ತ ನಗರಸಭೆ ವ್ಯಾಪ್ತಿಯ ಆಸ್ತಿ ಮಾಲೀಕರು ತಮ್ಮ ಆಸ್ತಿಗಳಿಗೆ ಜುಲೈ 31 ರೊಳಗಾಗಿ ಸ್ವಯಂ ಘೋಷಿತ ಆಸ್ತಿ ತೆರಿಗೆಯನ್ನು ಪಾವತಿಸಿ, ಶೇ. 5ರಷ್ಟು ರಿಯಾಯಿತಿ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳಬಹುದಾಗಿದೆ. ಈಗಾಗಲೇ 2024–25ನೇ ಸಾಲಿಗೆ ಮೇ ಮತ್ತು ಜೂನ್ ಮಾಹೆಯಲ್ಲಿ ಶೇ.5ರಷ್ಟು ರಿಯಾಯಿತಿ ಪಡೆಯದೇ ಪೂರ್ಣ ಪ್ರಮಾಣದಲ್ಲಿ ಆಸ್ತಿ ತೆರಿಗೆಯನ್ನು ಪಾವತಿಸಿರುವ ಆಸ್ತಿ ಮಾಲೀಕರು, ಚಲನ್ ಮತ್ತು ವಿವರದ ಪಟ್ಟಿ ತೋರಿಸಿ ಮುಂದಿನ ಆರ್ಥಿಕ ವರ್ಷ ಅಂದರೆ, 2025–26ನೇ ಸಾಲಿನಲ್ಲಿ ಆಸ್ತಿ ತೆರಿಗೆ ಪಾವತಿಸುವ ಸಂದರ್ಭದಲ್ಲಿ ಶೇ.5ರಷ್ಟು ರಿಯಾಯಿತಿ ಪಡೆಯಬಹುದು.

### ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳಿಗೆ ನಗದು ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

» ಚಿತ್ರದುರ್ಗ

2023–24ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿ ಸಾರ್ವತ್ರಿಕ ಪರೀಕ್ಷೆಗಳಲ್ಲಿ ಗರಿಷ್ಠ ಅಂಕ ಪಡೆದ ಕರ್ನಾಟಕದ ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳಿಗೆ "ಜನರಲ್ ಕೆ.ಎಸ್.ತಿಮ್ಮಯ್ಯ" ನಗದು ಪ್ರಶಸ್ತಿಗಾಗಿ" ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಶುಲ್ಕ ರಹಿತ ಅರ್ಜಿಗಳನ್ನು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಚೇರಿಯಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು 2024 ಅಕ್ಟೋಬರ್ 30 ರೊಳಗೆ ಇಲಾಖೆಗೆ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಕಚೇರಿಯ ದೂರವಾಣಿ ಸಂಖ್ಯೆ : 08182–220925 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

### ವಿದ್ಯಾರ್ಥಿ ನಿಲಯಕ್ಕೆ ಅರ್ಜಿ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ 2024–25ನೇ ಸಾಲಿಗೆ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾತಿ, ಪ.ವರ್ಗ, ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 10 ಕೊನೆಯ ದಿನವಾಗಿದೆ. ವಿದ್ಯಾರ್ಥಿಗಳು https://shp.karnataka.gov.in/bcwd ಜಾಲತಾಣದ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಪ್ರವರ್ಗ–1, ಎಸ್.ಸಿ. ಮತ್ತು ಎಸ್.ಟಿ ವರ್ಗದ ವಾರ್ಷಿಕ ಆದಾಯ 1.00 ಲಕ್ಷ, ಹಾಗೂ ಪ್ರವರ್ಗ–2ಎ, 2ಬಿ,3ಎ, 3ಬಿ, ಇತರೆ ಹಿಂದುಳಿದ ವರ್ಗಗಳ ವಾರ್ಷಿಕ ಆದಾಯ ರೂ.44500/ ಮೀರಿರಬಾರದು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನ್ನು ಪರಿಶೀಲಿಸಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ದೋಷಗಳು ಉಂಟಾದಲ್ಲಿ bcwdhelpline@gmail.com ಇ–ಮೇಲ್ ಮುಖಾಂತರ ಸಂಪರ್ಕಿಸಲು ಸೂಚಿಸಿದೆ. ಮಾಹಿತಿಗಾಗಿ ಇಲಾಖೆ ದೂ. 8050770004, 8050770005

## ಸಚಿವ ಸತೀಶ್ ಜಾರಕಿಹೊಳಿ ಭೇಟಿಯಾಗಿ ಆಶೀರ್ವಾದ ಪಡೆದ ಜಿಲ್ಲಾ ಕಾಂಗ್ರೆಸ್ ಎಸ್ಸಿ ವಿಭಾಗದ ಅಧ್ಯಕ್ಷ ಮಂಜುನಾಥ್

» ಚಿತ್ರದುರ್ಗ

ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಪಂಗಡದ ಅಧ್ಯಕ್ಷರಾಗಿ ನೇಮಕಗೊಂಡಿರುವ ಬಿ.ಮಂಜುನಾಥ್ ಲೋಕೋಪಯೋಗಿ ಸಚಿವ ಸತೀಶ್‌ಜಾರಕಿಹೊಳಿರವರ ನಿವಾಸಕ್ಕೆ ತೆರಳಿ ಆಶೀರ್ವಾದ ಪಡೆದರು.

ಬೆಂಗಳೂರಿನಲ್ಲಿರುವ ಅವರ ನಿವಾಸಕ್ಕೆ ತೆರಳಿ ಸಚಿವ ಸತೀಶ್‌ಜಾರಕಿಹೊಳಿರವರನ್ನು ಸನ್ಮಾಸಿದ ಬಿ.ಮಂಜುನಾಥ್ ರಾಜಕೀಯವಾಗಿ ಬೆಳೆಯಲು ಮಾರ್ಗದರ್ಶನ ಬೇಕು ಎಂದು ವಿನಂತಿಸಿದರು. ಮರುಳಾರಾಧ್ಯ, ಬಚ್ಚಬೋರನಹಟ್ಟಿ ಬಸಣ್ಣ, ಕಾಂಗ್ರೆಸ್ ಕಿಸಾನ್‌ಸೆಲ್ ವಿಭಾಗದ ಅಧ್ಯಕ್ಷ ನಾಗರಾಜ್, ಸೂರ್ಯಪ್ರಕಾಶ್ ಈ ಸಂದರ್ಭದಲ್ಲಿದ್ದರು.



## ಬಾಬು ಜಗಜೀವನ್ ರಾಂ ಪುಣ್ಯ ಸ್ಮರಣೆ




» ಚಿತ್ರದುರ್ಗ

ಹಸಿರು ಕ್ರಾಂತಿಯ ಹರಿಹಾರ, ರಾಷ್ಟ್ರನಾಯಕ ಹಾಗೂ ಭಾರತದ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ್ ರಾಂ ಅವರ 38ನೇ ಪುಣ್ಯ ಸ್ಮರಣೆ ನಿಮಿತ್ತ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪುಷ್ಪ ನಮನ ಸಲ್ಲಿಸಲಾಯಿತು. ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಮುಂತಾದವರು ಬಾಬು ಜಗಜೀವನ್ ರಾಂ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಗೌರವ ಸಲ್ಲಿಸಿದರು.

## ಪ್ರಮುಖ ಸುದ್ದಿ

ಜಿಪಂ ಸಿಇಓ ಎಸ್.ಜೆ.ಸೋಮಶೇಖರ್


# ಗ್ರಾಮದಲ್ಲಿ ಕಲುಷಿತ ನೀರಿನ ಪ್ರಕರಣ ಆಗದಂತೆ ಕ್ರಮ ಕೈಗೊಳ್ಳಿ

» ಚಿತ್ರದುರ್ಗ

ಎಲ್ಲಾ ಗ್ರಾಮ ಪಂಚಾಯತಿ ಮಟ್ಟದಲ್ಲಿ ನೀರು ಮತ್ತು ನೈರ್ಮಲ್ಯ ಸಮಿತಿ ಸದಸ್ಯರಿಗೆ, ನೀರುಗಂಟಿಗಳಿಗೆ ಮಾಹಿತಿಯನ್ನು ನೀಡಿ. ಯಾವುದೇ ಗ್ರಾಮಗಳಲ್ಲಿ ಕಲುಷಿತ ನೀರಿನ ಪ್ರಕರಣಗಳು ಉಂಟಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಜೆ.ಸೋಮಶೇಖರ್ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಪಂಚಾಯತ್, ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ವಿಭಾಗ ಚಿತ್ರದುರ್ಗ ಇವರ ಸಹಯೋಗದಲ್ಲಿ ಹೊಳಲ್ಕೆರೆ ಮತ್ತು ಹೊಸದುರ್ಗ ತಾಲ್ಲೂಕುಗಳ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಫೀಲ್ಡ್ ಟೆಸ್ಟ್ ಕಿಟ್ ಮತ್ತು ಹೆಚ್ 2 ಎಸ್ ವೈಲ್ಸ್ ಉಪಯೋಗಿಸಿ ನೀರು ಪರಿಕ್ಷೆಗಳನ್ನು ಕೈಗೊಳ್ಳಲು ಜಿಲ್ಲಾ ಮಟ್ಟದಲ್ಲಿ ತರಭೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯ 6 ತಾಲ್ಲೂಕು ಗಳ 189 ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನೀರು ಪರೀಕ್ಷೆ ಕಿಟ್ ಮತ್ತು ವೈಲ್ಸ್ ಉಪಯೋಗಿಸಿ ನೀರಿನ ಪರೀಕ್ಷೆಗಳನ್ನು ಕೈಗೊಳ್ಳಲು ಪರಿಣಾಮಕಾರಿಯಾಗಿ ತರಭೇತಿಯನ್ನು ನೀಡಲಾಗಿದೆ. ಅದರಿಂದ ಎಲ್ಲಾ ಗ್ರಾಮ ಪಂಚಾಯತಿ ಮಟ್ಟದಲ್ಲಿ ನೀರು ಮತ್ತು ನೈರ್ಮಲ್ಯ ಸಮಿತಿ ಸದಸ್ಯರಿಗೆ ಮತ್ತು ನೀರುಗಂಟಿಗಳಿಗೆ ಮಾಹಿತಿಯನ್ನು ನೀಡಿ ಯಾವುದೇ ಗ್ರಾಮಗಳಲ್ಲಿ ಕಲುಷಿತ ನೀರಿನ ಪ್ರಕರಣಗಳು ಆಗದಂತೆ ಕ್ರಮ ಕೈಗೊಳ್ಳಬೇಕು. ತರಬೇತಿ ಪಡೆದಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಂದ ಮಾಹಿತಿ ಹಾಗೂ ಅಭಿಪ್ರಾಯವನ್ನು ಪಡೆದುಕೊಂಡರು.



ಯೋಜನಾ ನಿರ್ದೇಶಕ ಡಾ. ಎಸ್. ರಂಗಸ್ವಾಮಿ ರವರು ಮಾತನಾಡಿ, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯ ಸದಸ್ಯರಿಗೆ ಗ್ರಾಮ ಪಂಚಾಯತಿ ಮಟ್ಟದಲ್ಲಿ ನೀರು ಪರೀಕ್ಷೆ ಕಿಟ್‌ಗಳ ಮೂಲಕ ಕುಡಿಯುವ ನೀರಿನ ಜಲಮೂಲಗಳ ನೀರು ಮಾದರಿಯನ್ನು ಸಂಗ್ರಹಿಸಿ ಪರೀಕ್ಷೆ ಮಾಡಬೇಕು. ನೀರು ಕುಡಿಯಲು ಯೋಗ್ಯವಾಗಿ ಇಲ್ಲದಿದ್ದರೆ ಅಂತಹ ನೀರನ್ನು ತಾಲ್ಲೂಕು ಮಟ್ಟದ ನೀರು ಪರೀಕ್ಷಾ ಪ್ರಯೋಗಾಲಯಕ್ಕೆ ತಂದು ನೀರು ಪರೀಕ್ಷೆ ಮಾಡಿಸಿ, ನಂತರ ಅದರ ಬಗ್ಗೆ ಕ್ರಮ ಕೈಗೊಳ್ಳಲು ತಿಳಿಸಿದರು. ಸ್ವಚ್ಛ ಭಾರತ್ ಮಿಷನ್ ಯೋಜನೆಯ ವೈಯುಕ್ತಿಕ ಗೃಹ ಶೌಚಲಯಗಳು & ಬೂದು ನೀರು ನಿರ್ವಹಣೆಯ ಕಾಮಗಾರಿಗಳು ತ್ವರಿತವಾಗಿ ಪ್ರಗತಿ ಸಾಧಿಸಲು ಸೂಚಿಸಿದರು.

ಉಪ ಕಾರ್ಯದರ್ಶಿಗಳಾದ ಶ್ರೀ. ಕೆ. ತಿಮ್ಮಪ್ಪನವರು ಮಾತನಾಡಿ ಫೀಲ್ಡ್ ಟೆಸ್ಟ್ ಕಿಟ್ ಮೂಲಕ ಪ್ರತಿ ಗ್ರಾಮದಲ್ಲಿ ಕುಡಿಯುವ ನೀರಿನ ಜಲ ಮೂಲಗಳಿಂದ ನೀರನ್ನು ಸಂಗ್ರಹಿಸಿ ಪ್ರತಿ ತಿಂಗಳು ನೀರಿನ ಮಾದರಿಯನ್ನು ಪರೀಕ್ಷಿಸಿ ವರದಿಯನ್ನು ನಿಗದಿತ ಪೋರ್ಟಲ್ ನಲ್ಲಿ ಇಂಧೀಕರಿಸಬೇಕು. ಪ್ರತಿ ಗ್ರಾಮದಲ್ಲಿ ನೀರುಗಂಟಿ ಮೂಲಕ ಪೈಪ್ ಲೈನ್ ಹೊಡೆದು ಹೋಗಿದ್ದರೆ ಕೂಡಲೇ ಗುರುತಿಸಿ ಸರಿಪಡಿಸಿ ನೀರು ಸರಬರಾಜು ಮಾಡಬೇಕು ಮತ್ತು ಗ್ರಾಮಗಳಲ್ಲಿ ಓವರ್ ಹೆಡ್ ಟ್ಯಾಂಕ್, ಆರ್.ಓ ಪ್ಲಾಂಟ್, ಮಿನಿ ಟ್ಯಾಂಕ್ ಮತ್ತು ಜಲ ಮೂಲಗಳ ಹತ್ತಿರ ಸ್ವಚ್ಛಗೊಳಿಸಿ ಕಲುಷಿತ ವಾಗದಂತೆ ಜಾಗೃತ ವಹಿಸಬೇಕು. ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳು ಪುನರ್ ರಚನೆ ಮಾಡಿ ನಮೂನೆಗಳನ್ನು ಕಡ್ಡಾಯವಾಗಿ ಜಿಲ್ಲಾ ಪಂಚಾಯತ್ ಕಛೇರಿಗೆ ಸಲ್ಲಿಸಬೇಕು. ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯ ಸದಸ್ಯರ ಸಹಕಾರದಿಂದ ಗ್ರಾಮಗಳಲ್ಲಿ ನೀರು ಮತ್ತು ನೈರ್ಮಲ್ಯಕ್ಕೆ ಸಂಬಂಧಿಸಿದಂತೆ 3 ತಿಂಗಳಿಗೊಮ್ಮೆ ಚರ್ಚಿಸಿ ಸಭಾ ನಡವಳಿಯನ್ನು ರಿಜಿಸ್ಟರ್ ಪುಸ್ತಕದಲ್ಲಿ ನಮೂದಿಸಲುತಿಳಿಸಿದರು.ಕಾರ್ಯಪಾಲಕ ಅಭಿಯಂತರರಾದ ಬಸನಗೌಡ ಪಾಟೀಲ್ ರವರು ಮಾತನಾಡಿ, ಹೊಳಲ್ಕೆರೆ ಮತ್ತು ಹೊಸದುರ್ಗ ತಾಲ್ಲೂಕುಗಳ ಜಲ ಜೀವನ್ ಮಿಷನ್ ಯೋಜನೆಯ ಕಾರ್ಯಾತ್ಮಕ ನಳ ಸಂಪರ್ಕ ಕಾಮಗಾರಿಗಳ ಕುರಿತು ಮಾಹಿತಿ ನೀಡಿದರು. ಇಂಜಿನಿಯರ್ ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಮನ್ವಯದೊಂದಿಗೆ ಗ್ರಾಮಸ್ಥರಿಗೆ ಶುದ್ಧ ಮತ್ತು ಸುರಕ್ಷಿತ ಕುಡಿಯುವ ನೀರನ್ನು ಒದಗಿಸಬೇಕು. ನೀರನ್ನು ಮಿತವಾಗಿ ಬಳಸಲು ಸಾರ್ವಜನಿಕರಿಗೆ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ಸದಸ್ಯರ ಮೂಲಕ ಮಾಹಿತಿಯನ್ನು ನೀಡಬೇಕೆಂದು ಸೂಚಿಸಿದರು. ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಲು ಕ್ರಮವಹಿಸಬೇಕು. ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಕಡ್ಡಾಯವಾಗಿ ಕ್ಷೇತ್ರ ಪರೀಕ್ಷಾ ಕಿಟ್ ಗಳನ್ನು ಬಳಸಿಕೊಳ್ಳಲು ತಿಳಿಸಿದರು.





## ಫಾಸ್ಟ್ ನ್ಯೂಸ್

### ಮಾಜಿ ಸೈನಿಕರ ಮಕ್ಕಳಿಗೆ ಶಿಷ್ಯವೇತನಕ್ಕಾಗಿ ಅರ್ಜಿ

» **ದಾವಣಗೆರೆ**

ಪ್ರಸಕ್ತ ಸಾಲಿಗಾಗಿ ಒಂದನೇ ತರಗತಿಯಿಂದ ಅಂತಿಮ ಪದವಿ, ಡಿಪ್ಲೋಮಾ ಮತ್ತು ವೃತ್ತಿಪರ ಪದವಿ ವರೆಗೆ ರಾಜ್ಯದಲ್ಲಿರುವ ಹಾಗೂ ಸರ್ಕಾರದಿಂದ ಮಾನ್ಯತೆ ಪಡೆದ ವಿದ್ಯಾಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ರಾಜ್ಯದ ಮೂಲ ನಿವಾಸಿ ಮಿಲಿಟರಿ ಪಿಂಚಣಿದಾರ ಮಾಜಿ ಸೈನಿಕರ ಮಕ್ಕಳಿಗೆ (ಅಧಿಕಾರಿಗಳನ್ನು ಹೊರತುಪಡಿಸಿ) ಶಿಷ್ಯವೇತನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಶುಲ್ಕ ರಹಿತ ಅರ್ಜಿಗಳನ್ನು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಕಚೇರಿಯಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ಸೆಪ್ಟಂಬರ್ 30 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹಾಗೂ ವೃತ್ತಿಪರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವವರಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಅಕ್ಟೋಬರ್ 31 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಕಚೇರಿಯ ದೂ.ಸಂ: 08182-220925 ಸಂಪರ್ಕಿಸಬೇಕೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

### ಸಾರಿಗೆ ಕಚೇರಿಯಲ್ಲಿ ಬಹಿರಂಗ ಹರಾಜು

» **ದಾವಣಗೆರೆ**

ಪ್ರಾದೇಶಿಕ ಸಾರಿಗೆ ಕಚೇರಿಯಿಂದ ಸರ್ಕಾರಕ್ಕೆ ತೆರಿಗೆ ಬಾಕಿ ಇರುವ ವಾಹನಗಳ ಹಾಗೂ ಅನುಪಯುಕ್ತ ವಾಹನಗಳಬಹಿರಂಗಹರಾಜುಮಾಡಲಾಗುವುದು. ಜುಲೈ 24 ಹರಾಜಿನಲ್ಲಿ ಭಾಗವಹಿಸಬಹುದು. ಹರಾಜಿನಲ್ಲಿ ಭಾಗವಹಿಸಿದವರು ಜಿ.ಎಸ್.ಟಿ ಮತ್ತು ಸಿ.ಜಿ.ಎಸ್.ಟಿ ಟಿನ್ ನಂಬರ್ ಹೊಂದಿರಬೇಕು. ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ಸಾರಿಗೆ ಕಚೇರಿಯ ನೋಟೀಸ್ ಬೋರ್ಡ್‌ನಲ್ಲಿ ವೀಕ್ಷಿಸಬಹುದೆಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ತಿಳಿಸಿದ್ದಾರೆ.

### ವಿದ್ಯಾರ್ಥಿನಿಲಯ ಕಟ್ಟಡ ಉದ್ಘಾಟನೆ

» **ದಾವಣಗೆರೆ**

ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಸಚಿವರು, ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್. ಮಲ್ಲಿಕಾರ್ಜುನ ಇವರ ಅಧ್ಯಕ್ಷತೆಯಲ್ಲಿ ಜುಲೈ 8 ರಂದು ಮಧ್ಯಾಹ್ನ 1.30ಕ್ಕೆ ನಗರದ ತಾಜ್ ಪ್ಯಾಲೇಸ್ ರಸ್ತೆ, ಬೂದಿಹಾಳ್ ಮುಖ್ಯ ರಸ್ತೆಯಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ,ಸಾಮಾನ್ಯ-1,(ಬಿಸಿಡಬ್ಲ್ಯೂಡಿ-1900), ಇಲ್ಲಿ ನೂತನವಾಗಿ ನಿರ್ಮಿಸಲಾಗಿರುವ ವಿದ್ಯಾರ್ಥಿನಿಲಯದ ಕಟ್ಟಡದ ಉದ್ಘಾಟನಾ ಕಾರ್ಯಕ್ರಮ ನಡೆಯಲಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಗಾಯಿತ್ರಿ. ಕೆ.ಹೆಚ್ ತಿಳಿಸಿದ್ದಾರೆ.

### ಆಸ್ತಿ ತೆರಿಗೆ ಪಾವತಿಸುವ ಅವಧಿ ವಿಸ್ತರಣೆ

» **ದಾವಣಗೆರೆ**

ಪ್ರಸಕ್ತ ಸಾಲಿನ ಆಸ್ತಿ ತೆರಿಗೆ ಪಾವತಿಯ ಮೇಲೆ ಶೇ.5 ರಷ್ಟು ರಿಯಾಯಿತಿ ಸೌಲಭ್ಯವನ್ನು ಜುಲೈ 31 ರವರೆಗೆ ವಿಸ್ತರಿಸಲಾಗಿದೆ. ಆಸ್ತಿ ತೆರಿಗೆಯನ್ನು ಪಾವತಿಸದೇ ಇರುವವರು ಜುಲೈ 31 ಒಳಗಾಗಿ ಪಾವತಿಸಿ ಚಾಲ್ತಿ ಸಾಲಿನ ಆಸ್ತಿ ತೆರಿಗೆಯ ಶೇ.5ರ ರಿಯಾಯಿತಿ ಸೌಲಭ್ಯದ ಸದುಪಯೋಗವನ್ನು ಪಡೆದುಕೊಳ್ಳಬೇಕು. ತಪ್ಪಿದಲ್ಲಿ ಆಗಸ್ಟ್ 1 ರಿಂದ ಶೇ.2 ರಷ್ಟು ದಂಡವನ್ನು ವಿಧಿಸಲಾಗುವುದೆಂದು ಮಲೇಬೆನ್ನೂರು ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸಲು ಜುಲೈ 10 ಕೊನೆಯ ದಿನ

» **ಚಿತ್ರದುರ್ಗ**

ಎಚ್.ಆಂಜನೇಯಚಾರಿಟಬಲ್ ಟ್ರಸ್ಟ್ ವತಿಯಿಂದ ಮಾದಿಗ ಸಮುದಾಯದ ಎಸ್.ಎಸ್.ಎಲ್.ಸಿ, ಪಿಯುಸಿ ಪ್ರತಿಭಾವಂತರಿಗೆ ಪ್ರತಿಭಾ ಪುರಸ್ಕಾರ ನೀಡಲುಅರ್ಜಿಆಹ್ವಾನಿಸಲಾಗಿದ್ದು. ಜುಲೈ 10 ಕೊನೆ ದಿನಾಂಕ ಆಗಿದೆ. ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿಯಲ್ಲಿ ಶೇ.85 ಕ್ಕಿಂತ ಹೆಚ್ಚು ಅಂಕ ಗಳಿಸಿದ ಮಾದಿಗ ಸಮುದಾಯದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಚಿತ್ರದುರ್ಗಜಿಲ್ಲೆಯ ನಿವಾಸಿ ಆಗಿರಬೇಕು, ಚಿತ್ರದುರ್ಗಜಿಲ್ಲೆಯ ಶಾಲಾ-ಕಾಲೇಜ್‌ಗಳಲ್ಲಿ ಓದಿರಬೇಕು. ಪ್ರತಿಭಾ ಪುರಸ್ಕಾರಕ್ಕೆಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಆಕರ್ಷಕ ಫಲಕ, ಶಾಲು, ಹಾರ, ಸನ್ಮಾನ ಪತ್ರದಜೊತೆಗೆ ಪ್ರೋತ್ಸಾಹಧನ ನೀಡಿಗೌರವಿಸಲಾಗುವುದು. ಅರ್ಜಿ ಸಲ್ಲಿಸಲು ಬಯಸುವವರುಆನ್‌ಲೈನ್ ಮೂಲಕ hanjaneyacharitabletrust.in ವೆಬ್‌ಸೈಟ್‌ನಲ್ಲಿಅರ್ಜಿ ಸಲ್ಲಿಸಬಹುದು. ಸಮಾರಂಭದ ದಿನಾಂಕ ಹಾಗೂ ಸ್ಥಳವನ್ನು ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡ ನಂತರ ತಿಳಿಸಲಾಗುವುದು.ಸ್ವವಿವರದಜೊತೆ ಪಾಸ್ ಫೋಟೋ, ಅಂಕಪಟ್ಟಿ, ಜಾತಿ ಪ್ರಮಾಣ ಪತ್ರದ ನಕಲು ಪ್ರತಿಯೊಂದಿಗೆಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ 9743048006ಅಥವಾ 8073050019 ಗೆ ಸಂಪರ್ಕಿಸಬಹುದುಎಂದುಕಾರ್ಯಕ್ರಮ ಸಂಘಟಕರಾದ ಸಿ.ಎನ್.ಕುಮಾರ್, ಎ.ನಂದೀಶ್ ತಿಳಿಸಿದ್ದಾರೆ.

---

**ಪಿಸಿಪಿಎನ್‌ಡಿಟಿ ಸಲಹಾ ಸಮಿತಿ ಪುನರ್‌ರಚನೆ**

# ಲಿಂಗ ಪತ್ತೆ: ಮಾಹಿತಿದಾರರಿಗೆ ಲಕ್ಷರೂ ಬಹುಮಾನ

» **ಚಿತ್ರದುರ್ಗ**

ಪಿ.ಸಿ.ಪಿ.ಎನ್.ಡಿ.ಟಿ (ಗರ್ಭಪೂರ್ವ ಮತ್ತು ಪ್ರಸವಪೂರ್ವ ಲಿಂಗ ಪತ್ತೆ ತಂತ್ರ ವಿಧಾನಗಳು (ಲಿಂಗ ಆಯ್ಕೆ ನಿಷೇಧ) ಕಾಯ್ದೆ ಅನುಸಾರ ಸಲಹಾ ಸಮಿತಿಯನ್ನು ಪುನರ್ ರಚಿಸಲಾಗಿದ್ದು, ಸಲಹಾ ಸಮಿತಿ ಅಧ್ಯಕ್ಷರಾಗಿ ಚಿತ್ರದುರ್ಗದ ಖಾಸಗಿ ನರ್ಸಿಂಗ್ ಹೋಂನ ತಜ್ಞ ವೈದ್ಯೆ ಡಾ.ಸೌಮ್ಯ, ಸದಸ್ಯ ಕಾರ್ಯದರ್ಶಿಯಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್, ಸದಸ್ಯರುಗಳಾಗಿ, ಡಾ.ದೇವರಾಜು, ಡಾ.ಸತ್ಯನಾರಾಯಣ, ಕಾನೂನು ಸಲಹೆಗಾರರಾಗಿ ವಕೀಲ ಉಮೇಶ್, ಸರ್ಕಾರೇತರ ಸ್ವಯಂ ಸೇವಾ ಸಂಘದ ಮೀನಾಕ್ಷಿ, ಗಾಯಿತ್ರಿ ಶಿವರಾಂ, ಜಿ.ಎಸ್. ಗೌಡ ಸೇರಿದಂತೆ ಜಿಲ್ಲಾ ವಾರ್ತಾಧಿಕಾರಿ, ಸರ್ಕಾರಿ ಅಭಿಯೋಜಕರು ಕಾರ್ಯನಿರ್ವಹಿಸಲಿದ್ದಾರೆ.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಶನಿವಾರ ಸಲಹಾ ಸಮಿತಿ ಸಭೆ ಜರುಗಿತು. ಸಭೆಯಲ್ಲಿ ಚಿತ್ರದುರ್ಗ ನಗರದ ಜೋಗಿಮಟ್ಟಿ ರಸ್ತೆಯಲ್ಲಿರುವ ಮಾತೃತ್ವ ಮೆಟರ್‌ನಿಟಿ ಮತ್ತು ಫರ್ಟಿಲಿಟಿ ಸೆಂಟರ್ ಹೊಸ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್ ತೆರೆಯಲು ಅನುಮತಿ ನೀಡಲಾಯಿತು.

ಹೊಸದುರ್ಗದ ಮಾರುತಿ ನರ್ಸಿಂಗ್ ಹೋಂ, ಚಿತ್ರದುರ್ಗ ನಗರದ ಗುರು



ಕೊಟ್ಟೂರೇಶ್ವರ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್‌ಗಳ ನೊಂದಣಿಗಳನ್ನು ಪುನಃ ನವೀಕರಿಸಲಾಯಿತು. ಹೊಸದುರ್ಗದ ಶಾರದಾ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್, ಹಿರಿಯೂರಿನ ಸಾಯಿ ಶ್ರೀನಿವಸ ಡಯೋಗ್ನೋಸಿಸ್ ಸೆಂಟರ್‌ಗಳ ವಿಳಾಸ ಬದಲಾವಣೆಗೆ ಅನುಮತಿ ನೀಡಲಾಯಿತು. ನಗರದ ಪಶುಸಂಗೋಪನೆ ಇಲಾಖೆಯ ಪಾಲಿ ಕ್ಲಿನಿಕ್, ಮತ್ತು ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್ ನೋಂದಣಿ ಅವಧಿ ಮುಕ್ತಾಯವಾಗಿದ್ದು, ನವೀಕರಿಸಿಕೊಳ್ಳುವಂತೆ ಪಶು ಇಲಾಖೆ ಉಪನಿರ್ದೇಶಕರಿಗೆ ಪತ್ರ ಬರೆಯಲು ನಿರ್ಣಯ ಕೈಗೊಳ್ಳಲಾಯಿತು.

ಹಿರಿಯೂರಿನ ಬಾಲಾಜಿ ನರ್ಸಿಂಗ್ ಹೋಂ ಮತ್ತು ಡೆಂಟಲ್ ಕ್ಲಿನಿಕ್ ಮತ್ತು ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್ ಇವರು ಹೊಸದಾಗಿ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಯಂತ್ರ ಖರೀದಿಸಿದ ನಂತರ ಹೊಸದಾಗಿ ನೊಂದಣಿ ಮಾಡಬೇಕು.

ಬಸವೇಶ್ವರ ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆ ಇಲ್ಲಿ ಪ್ರಾತ್ಯಕ್ಷಿತೆಗಾಗಿ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಯಂತ್ರ ಬಳಸಲು ರಾಜ್ಯ ಮಟ್ಟದಲ್ಲಿ ಅನುಮತಿ ಪಡೆಯಲು ತಿಳಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು. ವೇದಾಂತ ಆಸ್ಪತ್ರೆ, ಚಿತ್ರದುರ್ಗ ಇವರು ಹೊಸದಾಗಿ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್ ಆರಂಭಿಸಲು ಸಲ್ಲಿಸಿದ ಅರ್ಜಿಯನ್ನು ತಜ್ಞ ರೇಡಿಯಾಲಜಿಸ್ಟ್ ಇಲ್ಲದ ಕಾರಣ ಅರ್ಜಿಯನ್ನು ತಿರಸ್ಕರಿಸಲಾಯಿತು.

ಸ್ಕ್ಯಾನಿಂಗ್ ಕೊಠಡಿಗೆ ಅನ್ಯರ ಪ್ರವೇಶ ನಿಷೇಧ : ಗರ್ಭಿಣಿಯರ ಸ್ಕ್ಯಾನಿಂಗ್ ವೇಳೆ ಸ್ಕ್ಯಾನಿಂಗ್ ಕೊಠಡಿಯೊಳಗೆ ಗರ್ಭಿಣಿಯರ ಕುಟುಂಬ ವರ್ಗ, ಹಾಗೂ ಇತರೆ ಸಹಾಯಕರ ಪ್ರವೇಶವನ್ನು ಕಡ್ಡಾಯವಾಗಿ ನಿಷೇಧಿಸಿ ಸರ್ಕಾರ ಆದೇಶ ಹೊರಡಿಸಿದೆ. ಇದರ ಜೊತೆಗೆ ಸ್ಕ್ಯಾನಿಂಗ್ ಯಂತ್ರಕ್ಕೆ ಹೆಚ್ಚುವರಿಯಾಗಿ ಕಂಪ್ಯೂಟರ್ ಮಾನಿಟರ್ ಅಳವಡಿಸುವುದನ್ನು ಸಹ ನಿಷೇಧಿಸಲಾಗಿದೆ. ಈ ಬಗ್ಗೆ ಮಾಹಿತಿ ಫಲಕವನ್ನು ಸ್ಕ್ಯಾನಿಂಗ್ ಸೆಂಟರ್‌ನಲ್ಲಿ ಪ್ರದರ್ಶಿಸಬೇಕು. ಈ ಅಂಶಗಳನ್ನು ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳು ಪಾಲಿಸುವಂತೆ ಸೂಚನೆ ನೀಡಲು ನಿರ್ಧರಿಸಲಾಯಿತು.

ಭ್ರೂಣ ಲಿಂಗ ಪತ್ತೆ ಬಗ್ಗೆ ಮಾಹಿತಿ ನೀಡಿದವರಿಗೆ ರೂ.1 ಲಕ್ಷ ಬಹುಮಾನ: ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ನಿಷೇಧ ಕಾಯ್ದೆ 1994ರ ಪ್ರಕಾರ ಭ್ರೂಣ ಲಿಂಗಪತ್ತೆಯು ಶಿಕ್ಷಾರ್ಹ ಅಪರಾಧವಾಗಿದ್ದು, ಭ್ರೂಣ ಲಿಂಗ ಪತ್ತೆ ಅಥವಾ ಹೆಣ್ಣು ಭ್ರೂಣ ಹತ್ಯೆ ಕೈಗೊಳ್ಳುವವರ ಬಗೆಗಿನ ಮಾಹಿತಿ ನೀಡುವವರಿಗೆ ರೂ.01 ಲಕ್ಷ ಬಹುಮಾನ ನೀಡಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಹೇಳಿದರು.

ಹೆಣ್ಣುಭ್ರೂಣಹತ್ಯೆಕುರಿತುಮಾಹಿತಿನೀಡಿ ಯಶಸ್ವಿಗೊಂಡ ಗುಪ್ತಕಾರ್ಯಾಚರಣೆಯ ಮಾಹಿತಿದಾರರಿಗೆ ಬಹುಮಾನವಾಗಿ ನೀಡಲಾಗುತ್ತಿದ್ದ ರೂ.50,000 ಮೊತ್ತವು ರೂ.01 ಲಕ್ಷಕ್ಕೆ ಏರಿಕೆಯಾಗಿದ್ದು, ಮಾಹಿತಿದಾರರ ವಿವರಗಳನ್ನು ಗೌಪ್ಯವಾಗಿಡಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಪಿಸಿಪಿಎನ್‌ಡಿಟಿ ಸಲಹಾ ಸಮಿತಿ ಅಧ್ಯಕ್ಷೆ ಡಾ.ಎಸ್.ಸೌಮ್ಯ, ಸದಸ್ಯರಾದ ಡಾ.ಸತ್ಯನಾರಾಯಣ, ಎಂ.ಉಮೇಶ್, ಕೆ.ಪಿ.ಮೀನಾಕ್ಷಿ ಇದ್ದರು.

---

# ಪ್ರತಿಭಾವಂತ ಮಕ್ಕಳ ಹಿಂದೆ ಸಮಾಜದ ಮುಖಂಡರು ಇದ್ದಾರೆನ್ನುವುದಕ್ಕೆ ಪ್ರತಿಭಾ ಪುರಸ್ಕಾರ ಸಾಕ್ಷಿ: ತಾಜ್‌ಪೀರ್

» **ಚಿತ್ರದುರ್ಗ**

ಶಿಕ್ಷಣದಲ್ಲಿ ಹೆಚ್ಚಿನ ಅಂಕಗಳನ್ನು ಪಡೆದು ಸಾಧನೆ ಮಾಡಿರುವವರನ್ನು ಗುರುತಿಸಿ ಸನ್ಮಾನಿಸಿದರೆ ಇತರೆಯವರಿಗೆ ಪ್ರೇರಣೆಯಾಗುತ್ತದೆಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಹೇಳಿದರು.

ಕರ್ನಾಟಕ ಮುಸ್ಲಿಂ ಕಲ್ಚರಲ್ ಅಕಾಡೆಮಿ ವತಿಯಿಂದ ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಗಳಿಸಿರುವ ಮುಸ್ಲಿಂ ವಿದ್ಯಾರ್ಥಿಗಳಿಗೆ ತ.ರಾ.ಸು.ರಂಗಮಂದಿರದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಪ್ರತಿಭಾ ಪುರಸ್ಕಾರ ಉದ್ಘಾಟಿಸಿ ಮಾತನಾಡಿದರು.

ನಾಲ್ಕೈದು ವರ್ಷಗಳ ಹಿಂದೆ ಮುಸ್ಲಿಂ ಸಮುದಾಯದ ವಿದ್ಯಾರ್ಥಿನಿಯರು ಹಿಜಾಬ್ ಸಮಸ್ಯೆ ಎದುರಿಸಿ ಅದರ ನಡುವೆಯೇ ಹತ್ತನೆ ತರಗತಿ ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಿರುವುದು ಕಮ್ಮಿ ಸಾಧನೆಯಲ್ಲ. ಪ್ರತಿಭಾವಂತ ಮಕ್ಕಳ ಹಿಂದೆ ಸಮಾಜದ ಮುಖಂಡರುಗಳು ಇದ್ದಾರೆನ್ನುವುದಕ್ಕೆ ಪ್ರತಿಭಾ ಪುರಸ್ಕಾರ ಮಾಡುತ್ತಿರುವುದೇ ಸಾಕ್ಷಿ ಎಂದು ತಿಳಿಸಿದರು.ಮುಸ್ಲಿಂ ಸಮಾಜದ ಹೆಣ್ಣು ಮಕ್ಕಳ ಶಿಕ್ಷಣಕ್ಕೂ ಸಮಾನ ಅವಕಾಶವಿದೆ. ತಂದೆ-ತಾಯಿಗಳು ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹಿಸುವುದರ ಜೊತೆಗೆ ಮಕ್ಕಳ ಚಲನವಲನದ ಕಡೆಗೂ ನಿಗಾ ಇಡಬೇಕೆಂದರು.ಹಿರಿಯ ನ್ಯಾಯವಾದಿ ಬಿ.ಕೆ. ರಹಮತ್‌ವುಲ್ಲಾ ಮಾತನಾಡಿ ಮಕ್ಕಳಿಗೆ ಹಣ ಆಸ್ತಿ ಸಂಪಾದಿಸುವ ಬದಲು ಶಿಕ್ಷಣವನ್ನೆ ದೊಡ್ಡ ಸಂಪತ್ತನ್ನಾಗಿ ಮಾಡಬೇಕು. ಶಿಕ್ಷಣದ ಕೊರತೆಯಿರುವವರು ಮಾತ್ರ ವಯಸ್ಸಾದ ತಂದೆ-ತಾಯಿಗಳನ್ನು ಮನೆಯಿಂದ ಹೊರ ಹಾಕುತ್ತಾರೆ. ಮುಸ್ಲಿಂ ಹೆಣ್ಣು ಮಕ್ಕಳಿಗೂ ಪುರುಷರಂತೆ



ಸಮಾನವಾಗಿ ಶಿಕ್ಷಣ ಕೊಡಿಸಬೇಕೆಂದು ಕುರಾನ್‌ನಲ್ಲಿ ಹೇಳಿದೆ. ಮಕ್ಕಳು ಚೆನ್ನಾಗಿ ಓದಿ ಜೀವನದಲ್ಲಿ ದೊಡ್ಡ ಹುದ್ದೆಯನ್ನು ಏರಲಿ ಎನ್ನುವ ಆಸೆ ಪೋಷಕರಿಗೂ ಇರಬೇಕು. ಮಕ್ಕಳು ಹೆಚ್ಚಿನ ಅಂಕಗಳನ್ನು ಪಡೆದು ಗುರು-ಹಿರಿಯರು ಅಪ್ಪ-ಅಮ್ಮನಿಗೆ ಕೀರ್ತಿ ತಂದರೆ ಅದಕ್ಕಿಂತ ದೊಡ್ಡ ಸಂತೋಷ ಮತ್ತೊಂದಿಲ್ಲ. ರಾಜಕೀಯದಲ್ಲಿ ಮುಸ್ಲಿಂ ಸಮಾಜಕ್ಕೆ ಆದ್ಯತೆಯಿಲ್ಲ. ನಮ್ಮ ಸಮಾಜ ಇಲ್ಲಿಯವರೆಗೂ ಕೇವಲ ಮತ ನೀಡುವುದಕ್ಕಷ್ಟೆ ಸೀಮಿತವಾಗಿದೆ.

ಆದರೆ ರಾಜಕೀಯವಾಗಿ ಅಧಿಕಾರ ಪಡೆಯಲು ಆಗುತ್ತಿಲ್ಲ. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್‌ರವರನ್ನು ಎಂ.ಎಲ್.ಸಿ.ಯನ್ನಾಗಿಯಾದರೂ ನೇಮಕ ಮಾಡಲಿ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಬಿ.ಕೆ.ರಹಮತ್‌ವುಲ್ಲಾ ಒತ್ತಾಯಿಸಿದರು.

ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂಆಲಿ ಮಾತನಾಡಿ ನಮ್ಮ ಕಾಲದಲ್ಲಿ ಶಿಕ್ಷಣವಂತರಾಗಬೇಕಾದರೆ ಅಷ್ಟೊಂದು ಸೌಲಭ್ಯವಿರಲಿಲ್ಲ. ಈಗ ಅಲ್ಪಸಂಖ್ಯಾತರ ಇಲಾಖೆಯಿಂದ ಸಾಕಷ್ಟು ಸೌಕರ್ಯಗಳಿವೆ. ಎಲ್ಲವನ್ನು ಬಳಸಿಕೊಂಡು ಶಿಕ್ಷಣವಂತರಾಗುವ ಮೂಲಕ ಮುಸ್ಲಿಂ ಸಮುದಾಯದ ವಿದ್ಯಾರ್ಥಿಗಳು ಜೀವನದಲ್ಲಿ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ಕರೆ ನೀಡಿದರು.

ವೈದ್ಯರು, ಇಂಜಿನಿಯರ್, ಐ.ಎ.ಎಸ್. ಐ.ಪಿ.ಎಸ್. ಅಧಿಕಾರಿಗಳು ಆಗಬಹುದು. ಅದಕ್ಕೆ ಕಠಿಣ ಪರಿಶ್ರಮ ಬೇಕು. ಸರ್ಕಾರದಲ್ಲಿ ಅನೇಕ ಸೌಲಭ್ಯಗಳಿವೆ. ಪ್ರಯೋಜನ ಪಡೆದುಕೊಂಡು ವಿದ್ಯಾವಂತರಾಗುವ ಮೂಲಕ ಗುರು-ಹಿರಿಯರು, ತಂದೆ-ತಾಯಿಗಳಿಗೆ ಗೌರವ ತರಬೇಕೆಂದು ಹೇಳಿದರು.ಧಾರ್ಮಿಕ ಚಿಂತಕ ಮೌಲಾನಾ ಎಜಾಜುಲ್ಲಾ ಸಾನಿಧ್ಯ ವಹಿಸಿದ್ದರು. ಕರ್ನಾಟಕ ಮುಸ್ಲಿಂ ಕಲ್ಚರಲ್ ಅಕಾಡೆಮಿ ಅಧ್ಯಕ್ಷ ಎಂ.ಹನೀಫ್ ಅಧ್ಯಕ್ಷತೆ ವಹಿಸಿದ್ದರು.ನಗರಸಭೆ ಮಾಜಿ ಅಧ್ಯಕ್ಷ ಮಹಮದ್ ಅಹಮದ್ ಪಾಷ, ಕರ್ನಾಟಕ ಮುಸ್ಲಿಂ ಕಲ್ಚರಲ್ ಅಕಾಡೆಮಿ ಕಾರ್ಯಾಧ್ಯಕ್ಷ ನವೀದ್ ಅಬ್ದುಲ್ಲಾ, ನ್ಯಾಯವಾದಿ ದಿಲ್‌ಶಾದ್ ಉನ್ನಿಸ, ಮುಸ್ಲಿಂ ವಕೀಲರ ಸಂಘದ ಅಧ್ಯಕ್ಷ ಸಮೀವುಲ್ಲಾ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎ.ಸಾಧಿಕ್‌ವುಲ್ಲಾ, ಪದವೀಧರ ವಿಭಾಗದ ಅಧ್ಯಕ್ಷ ಮುದಸಿರ್ ನವಾಜ್, ಸೈಯದ್ ವಲಿಖಾದ್ರಿ ವೇದಿಕೆಯಲ್ಲಿದ್ದರು.




ಕರ್ನಾಟಕ ಮುಸ್ಲಿಂ ಕಲ್ಚರಲ್ ಅಕಾಡೆಮಿಯಿಂದ ಮುಸ್ಲಿಂ ಸಮುದಾಯದ ಪ್ರತಿಭಾವಂತ ಮಕ್ಕಳಿಗೆ ಸನ್ಮಾನ.

---

# ನವಣೆಕೆರೆ ಗ್ರಾಮದಲ್ಲಿ ನೂತನ ಸಿ.ಸಿ.ರಸ್ತೆ ಕಾಮಗಾರಿಗೆ ಭೂಮಿ ಪೂಜೆ ಸಲ್ಲಿಸಿದ ಶಾಸಕ ಚಂದ್ರಪ್ಪ



» **ಹೊಳಲ್ಕೆರೆ**

ಹೊಳಲ್ಕೆರೆ ಕ್ಷೇತ್ರದ 493 ಹಳ್ಳಿಗಳಲ್ಲಿ ಏನೇನು ಸಮಸ್ಯೆಗಳಿದೆ ಎನ್ನುವುದನ್ನು ಅರ್ಥಮಾಡಿಕೊಂಡು ಎಲ್ಲವನ್ನು ಬಗೆಹರಿಸುವಲ್ಲಿ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ತಾಲ್ಲೂಕಿನ ನವಣೆಕೆರೆ ಗ್ರಾಮದಲ್ಲಿ 25 ಲಕ್ಷ ರೂ. ವೆಚ್ಚದಲ್ಲಿ ನೂತನ ಸಿ.ಸಿ.ರಸ್ತೆ ಕಾಮಗಾರಿಗೆ ಶನಿವಾರ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದರು.

ಮನೆ ಮನೆಗೆ ಶುದ್ದ ಕುಡಿಯುವ ನೀರು ಪೂರೈಸುವುದಕ್ಕಾಗಿ ಹಿರಿಯೂರಿನ ವಾಣಿವಿಲಾಸಸಾಗರದಲ್ಲಿ ನೀರಿನ ಮಧ್ಯದಲ್ಲಿ ಪಿಲ್ಲರ್ ಎತ್ತಿ ಮಿಷನ್ ಕೂರಿಸಿ 2052 ನೇ ಇಸವಿವರೆಗೆ ನೀರಿಗೆ ತೊಂದರೆಯಾಗದಂತೆ ನೋಡಿಕೊಳ್ಳುವ ವ್ಯವಸ್ಥೆಯಾಗುತ್ತಿದೆ. ಇಪ್ಪತ್ತು ಕೋಟಿ ರೂ.ವೆಚ್ಚದಲ್ಲಿ ಹೈಟೆಕ್ ಆಸ್ಪತ್ರೆ, ಇಪ್ಪತ್ತು ಕೋಟಿ ರೂ.ಗಳಲ್ಲಿ ತಾಲ್ಲೂಕು ಕಚೇರಿ ನಿರ್ಮಿಸಲಾಗಿದೆ. ಚೆಕ್‌ಡ್ಯಾಂ, ಕೆರೆಗಳನ್ನು ಕಟ್ಟಿಸಿದ್ದೇನೆ. ಜ.26 ರೊಳಗೆ ಎಲ್ಲಾ ಕೆರೆಗಳಿಗೂ ನೀರು ತುಂಬಿಸಲಾಗುವುದೆಂದರು.

ಪಟ್ಟಣದ ಹೊಸದುರ್ಗ ರಸ್ತೆಯಲ್ಲಿರುವ ಕೆರೆಯ ಮಧ್ಯದಲ್ಲಿ ಶಿವಲಿಂಗ ಪ್ರತಿಷ್ಠಾಪಿಸಲಾಗಿದೆ. ರಾಜ್ಯದಲ್ಲಿ ಎಲ್ಲಿಯೂ ಸರ್ಕಾರಿ ಶಾಲೆ ಮಕ್ಕಳಿಗೆ ಉಚಿತ ಬಸ್ ವ್ಯವಸ್ಥೆ ಕಲ್ಪಿಸಿಲ್ಲ. ನಮ್ಮ ತಾಲ್ಲೂಕಿನಲ್ಲಿ ಸರ್ಕಾರಿ ಶಾಲೆಗೆ ಬರುವ ಮಕ್ಕಳಿಗೆ ತೊಂದರೆಯಾಗಬಾರದೆನ್ನುವ ಉದ್ದೇಶವಿಟ್ಟುಕೊಂಡು ಉಚಿತ ಬಸ್ ಸಂಚಾರ ಆರಂಭಿಸಲಾಗಿದೆ. ಸುತ್ತಮುತ್ತಲಿನ ಗುಡ್ಡಗಳಲ್ಲಿ ಗುಣಮಟ್ಟದ ಶಾಲಾ-ಕಾಲೇಜು ಹಾಸ್ಟೆಲ್‌ಗಳನ್ನು ನಿರ್ಮಿಸಿರುವುದರಿಂದ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ.ಯಲ್ಲಿ ಉತ್ತಮ ಫಲಿತಾಂಶ ಬಂದಿದೆ ಎಂದು ಸಂತಸ ವ್ಯಕ್ತಪಡಿಸಿದರು.

ರೈತರಿಗೆ ವಿದ್ಯುತ್ ತೊಂದರೆಯಾಗಬಾರದೆಂದು ಎನ್.ಜಿ.ಹಳ್ಳಿ ಬಳಿ ವಿದ್ಯುತ್ ಸ್ಟೇಷನ್ ಕಟ್ಟಲಾಗಿದೆ. ಚಿಕ್ಕಜಾಜೂರು ಬಳಿ 270 ಕೋಟಿ ರೂ.ವೆಚ್ಚದಲ್ಲಿ ಪವರ್ ಸ್ಟೇಷನ್ ನಿರ್ಮಾಣಕ್ಕೆ ಟೆಂಡರ್ ಕರೆಯಲಾಗಿದ್ದು, ಜೋಗ್‌ಫಾಲ್ಸ್‌ನಿಂದ ನೇರವಾಗಿ ವಿದ್ಯುತ್ ಸರಬರಾಜು ಮಾಡಿಕೊಳ್ಳಲಾಗುವುದು. ಜೀವನವೇ ಶಾಶ್ವತವಲ್ಲ ಎಂದ ಮೇಲೆ ಅಧಿಕಾರ ದೊಡ್ಡದಲ್ಲ ಎನ್ನುವುದನ್ನು ಅರಿತುಕೊಂಡು ಯಾರಿಂದಲೂ ಏನನ್ನು ಹೇಳಿಸಿಕೊಳ್ಳದೆ ಕ್ಷೇತ್ರದ ಮತದಾರರಸಮಸ್ಯೆಗಳನ್ನುಅರಿತು ಕೆಲಸ ಮಾಡುತ್ತಿದ್ದೇನೆಂದರು.

---

## ಪ್ರಮುಖ ಸುದ್ದಿ

**ಅವರ ಆದರ್ಶಗಳು ನಮ್ಮೆಲ್ಲರಿಗೂ ದಾರಿದೀಪ: ಶಾಸಕ ಟಿ.ರಘುಮೂರ್ತಿ**

# ಶೋಷಿತ ಸಮುದಾಯದ ಅಗ್ರಗಣ್ಯ ನಾಯಕ ಜಗಜೀವನರಾಮ್

» **ಚಳ್ಳಕೆರೆ**

ಹಸಿರುಕ್ರಾಂತಿ ಹರಿಕಾರ, ಶೋಷಿತ ಸಮುದಾಯದ ಅಗ್ರಗಣ್ಯ ನೇತಾರ ಮಾಜಿ ಉಪಪ್ರಧಾನಮಂತ್ರಿ ಬಾಬುಜಗಜೀವನ ರಾಮ್‌ರವರ ಆದರ್ಶಗಳು ನಮ್ಮೆಲ್ಲರಿಗೂ ಸದಾಶ್ರೀರಕ್ಷೆಯಾಗಿವೆ ಎಂದು ಕ್ಷೇತ್ರದ ಶಾಸಕ, ಕರ್ನಾಟಕ ಸಣ್ಣಕೈಗಾರಿಕೆ ಅಭಿವೃದ್ದಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವಾರ ಶಾಸಕರ ಭವನದಲ್ಲಿ ಬಾಬುಜಗಜೀವನರಾವ್‌ರವರ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ರಾಷ್ಟ್ರದಲ್ಲಿ ಶೋಷಿತ ಸಮುದಾಯದಕ್ಕೆ ಸೂಕ್ತವಾದ ಸೌಲಭ್ಯವಿಲ್ಲದೆ ಇಡೀ ಸಮುದಾಯ ಕತ್ತಲಲ್ಲಿ ಮುಳುಗಿತ್ತು.ಶೋಷಣೆಯ



ಕಪಿಮುಷ್ಠಿಯಲ್ಲಿ ಸಿಕ್ಕಿದ್ದ ದಲಿತ ಹಾಗೂ ಹಿಂದೂಳಿದ ಸಮುದಾಯ ಭವಿಷ್ಯವನ್ನು ರೂಪಿಸಿಕೊಳ್ಳಲು ಸಾಧ್ಯವಿಲ್ಲದಂತಹ ಪರಿಸ್ಥಿತಿ ಉಂಟಾಗಿತ್ತು. ಇಂತಹ ಸಂದರ್ಭದಲ್ಲಿ ಬಾಬುಜಗಜೀವನರಾಮ್ ತಮ್ಮದೇಯಾದ ತತ್ವ, ಸಿದ್ದಾಂತಗಳ ಮೂಲಕ ಸಮುದಾಯವನ್ನು ಸಂಘಟಿಸಿ ಸಮಾಜದ ಎಲ್ಲಾ ವರ್ಗದ ವಿಶ್ವಾಸವನ್ನು ಗಳಿಸಿ ಶೋಷಿತ ಸಮುದಾಯಕ್ಕೆ ಆಶಾಕಿರಣವಾಗಿ ಹೊರಹೊಮ್ಮಿದರು. ಇಂದು ನಾಡಿನೆಲ್ಲೆಡೆ ಅವರ ಪುಣ್ಯಸ್ಮರಣೆ ಕಾರ್ಯಕ್ರಮ ಅದ್ದೂರಿಯಾಗಿ ನಡೆಯುತ್ತಿದೆ. ನಾವು ಸಹ ಅವರ ಹಾದಿಯಲ್ಲೇ ನಡೆಯೋಣ ಎಂಬ ಸಂಕಲ್ಪ ಮಾಡೋಣವೆಂದರು.

ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯರಾದ ಕೆ.ವೀರಭದ್ರಪ್ಪ, ಬಿ.ಟಿ.ರಮೇಶ್‌ಗೌಡ, ಎಂ.ಜೆ. ರಾಘವೇಂದ್ರ, ನಾಮನಿರ್ದೇಶಕ ಸದಸ್ಯರಾದ ನೇತಾಜಿಪ್ರಸನ್ನ, ಬಡಗಿಪಾಪಣ್ಣ, ನಟರಾಜು, ವೀರಭದ್ರಪ್ಪ, ಅನ್ವರ್‌ಮಾಸ್ಟರ್, ಜಿಲ್ಲಾಕೆಡಿಪಿ ಸದಸ್ಯ ಓ.ರಂಗಸ್ವಾಮಿ, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಪಿ.ತಿಪ್ಪೇಸ್ವಾಮಿ, ತಾಲ್ಲೂಕು ಪಂಚಾಯಿತಿ ಕೆಡಿಪಿ ಸದಸ್ಯ ಸುರೇಶ್‌ಕುಮಾರ್, ಮಹಿಳಾ ಘಟಕದ ಅಧ್ಯಕ್ಷೆ ಗೀತಾಬಾಯಿ, ಮುಖಂಡರಾದ ಆನಂದಕುಮಾರ್, ರುದ್ರಮುನಿ, ಜಯಣ್ಣ, ತಿಪ್ಪೇಸ್ವಾಮಿ, ಸೈಪುಲ್ಲಾ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ದಾವಣಗೆರೆ ನೂತನ ಡಿಸಿ ಡಾ.ಗಂಗಾಧರಸ್ವಾಮಿ ಅಧಿಕಾರ ಸ್ವೀಕಾರ



ದಾವಣಗೆರೆ ನೂತನ ಜಿಲ್ಲಾಧಿಕಾರಿಯಾಗಿ ಡಾ: ಗಂಗಾಧರಸ್ವಾಮಿ ಜಿ.ಎಂ. ಇವರು ಶನಿವಾರ ಈ ಹಿಂದಿನ ಜಿಲ್ಲಾಧಿಕಾರಿಯಾಗಿದ್ದ ಡಾ; ವೆಂಕಟೇಶ್ ಎಂ.ವಿ ಅವರಿಂದ ಅಧಿಕಾರ ಸ್ವೀಕರಿಸಿದರು. ಡಾ; ಗಂಗಾಧರಸ್ವಾಮಿಯವರು 2014ರ ಬ್ಯಾಚ್‌ನ ಐಎಎಸ್ ಅಧಿಕಾರಿಯಾಗಿದ್ದು ಇದಕ್ಕೂ ಮೊದಲು ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ನಿರ್ದೇಶಕರಾಗಿ ಕೆಲಸ ಮಾಡಿದ್ದರು.

### ವಿದ್ಯಾರ್ಥಿ ನಿಲಯ ಪ್ರವೇಶಕ್ಕಾಗಿ ಅರ್ಜಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕು ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯ ವಿದ್ಯಾರ್ಥಿ ನಿಲಯಗಳ 2024–25 ನೇ ಸಾಲಿನ ಪ್ರವೇಶಕ್ಕಾಗಿ ಅನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 15 ಅರ್ಜಿ ಸಲ್ಲಿಸಲು ಕೊನೆಯ ದಿನ. ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಸಂಬಂಧಿಸಿದಂತೆ ಹಿಂದಿನ ಎಸ್.ಹೆಚ್.ಪಿ. ಪೋರ್ಟಲ್ ಬದಲಾಗಿ ಇಲಾಖೆಯ ಹೆಚ್.ಎಂ.ಐ.ಎಸ್. ತಂತ್ರಾಂಶದ ಮೂಲಕ ಅರ್ಜಿಯನ್ನು ಸಲ್ಲಿಸಲು ಕೋರಿದೆ. ಒಂದು ವೇಳೆ ತಂತ ್ರಾಂಶದಲ್ಲಿ ಅರ್ಜಿಯನ್ನು ಸಲ್ಲಿಸಲು ಸಾಧ್ಯವಾಗದೇ ಇದ್ದಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಮ್ಯಾನುಯಲ್ ಅರ್ಜಿಯನ್ನು ಜುಲೈ 15ರ ಒಳಗಾಗಿ ಸಂಬಂಧಿಸಿದ ನಿಲಯ ಪಾಲಕರಿಗೆ, ಸಹಾಯಕ ನಿರ್ದೇಶಕರು ಗ್ರೇಡ್–1, ಸಮಾಜ ಕಲ್ಯಾಣ ಇಲಾಖೆ, ಹಿರಿಯೂರು ಈ ಕಛೇರಿಗೆ ಸಲ್ಲಿಸಿ ಪ್ರವೇಶಾತಿ ಪಡೆಯಬಹುದು ಪ್ರಕಟಣೆ ತಿಳಿಸಿದೆ.

### ಮಕ್ಕಳ ಶಿಕ್ಷಣದಲ್ಲಿ ತಾಯಂದಿರ ಪಾತ್ರ ಕುರಿತು ಉಪನ್ಯಾಸ



» ಚಿತ್ರದುರ್ಗ

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಸಿರಿಗೆರೆ ಸಮೀಪದ ಡಿ.ಮದಕರಿಪುರ ಕಾರ್ಯಕ್ಷೇತ್ರದ ಸ್ಫೂರ್ತಿ ಮಹಿಳಾ ಜ್ಞಾನ ವಿಕಾಸ ಕೇಂದ್ರದಲ್ಲಿ ನಡೆದ ಸಭೆಯಲ್ಲಿ ಮಕ್ಕಳ ಶಿಕ್ಷಣದಲ್ಲಿ ತಾಯಂದಿರ ಪಾತ್ರ ಎನ್ನುವ ಕುರಿತು ಸದಸ್ಯರಿಗೆ ಮಾಹಿತಿ ನೀಡಲಾಯಿತು.

ತರಳಬಾಳು ಶಾಲೆಯ ಮುಖ್ಯ ಶಿಕ್ಷಕ ಸುನಿಲ್ ಕುಮಾರ್ ಸಭೆಯನ್ನುದ್ದೇಶಿಸಿ ಮಾತನಾಡುತ್ತ ಮನೆಯೆ ಮೊದಲ ಪಾಠಶಾಲೆ, ತಾಯಿಯೆ ಮೊದಲ ಗುರು ಎನ್ನುವ ನಾಣ್ಣುಡಿಯಿದೆ. ಹಾಗಾಗಿ ತಾಯಂದಿರು ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ಕೊಡಬೇಕು. ಮಕ್ಕಳನ್ನು ಕೇವಲ ಅಂಕಗಳಿಸುವುದಕ್ಕಷ್ಟೆ ಸೀಮಿತಗೊಳಿಸಬಾರದು. ಯಾವ ರಂಗದಲ್ಲಿ ಮಕ್ಕಳಿಗೆ ಆಸಕ್ತಿಯಿದೆ ಎನ್ನುವುದನ್ನು ತಿಳಿದುಕೊಂಡು ಅದಕ್ಕೆ ತಕ್ಕಂತೆ ಬೆಂಬಲಿಸಿ ಮಕ್ಕಳ ಭವಿಷ್ಯ ರೂಪಿಸಬೇಕೆಂದು ಸಲಹೆ ನೀಡಿದರು.ಮಕ್ಕಳ ಎದುರಿನಲ್ಲಿ ತಂದೆ–ತಾಯಿಗಳು ಕಿತ್ತಾಡಿದರೆ ಮಕ್ಕಳ ಮನಸ್ಸಿನ ಮೇಲೆ ಪ್ರಭಾವ ಬೀರುತ್ತದೆ. ಗುರು–ಹಿರಿಯರನ್ನು ಗೌರವಿಸುವ ಸಂಸ್ಕಾರವನ್ನು ಮಕ್ಕಳಿಗೆ ಕಲಿಸಿ ಮನೆಯಲ್ಲಿ ತಿಳಿಯಾದ ವಾತಾವರಣವಿರುವಂತೆ ನೋಡಿಕೊಳ್ಳುವುದು ತಾಯಂದಿರ ಜವಾಬ್ದಾರಿ ಎಂದುಹೇಳಿದರು.ಜ್ಞಾನವಿಕಾಸಸಮನ್ವಯಾಧಿಕಾರಿ ಶಿವಲೀಲಾ ಎಸ್.ಬಾಗೋಡಿ, ಕುಬೇರಮ್ಮ, ರೂಪ, ಪ್ರಮೀಳ, ಆಶಾ, ಜಯಮಾಲ, ಬೇಬಿ, ಸುಶೀಲಮ್ಮ, ರಂಜಿತ ಈ ಸಂದರ್ಭದಲ್ಲಿ ಹಾಜರಿದ್ದರು.

### ವಿದ್ಯಾರ್ಥಿ ನಿಲಯಕ್ಕೆ ಅರ್ಜಿ

» ಚಿತ್ರದುರ್ಗ

2024–25ನೇ ಶೈಕ್ಷಣಿಕ ಸಾಲಿಗೆ ಮೊಳಕಾಲ್ಮೂರು ತಾಲ್ಲೂಕು ವ್ಯಾಪ್ತಿಯ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಹಾಯಕ ನಿರ್ದೇಶಕ (ಗ್ರೇಡ್–2) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಸಂಸ್ಕೃತಿ ಚಿಂತಕ ಪ್ರೊ.ಬರಗೂರು ರಾಮಚಂದ್ರಪ್ಪ ಅಭಿಮತ**

# ಅಳಿಸಿಹೋಗುವುದನ್ನು ಉಳಿಸುವುದೇ ಸಂಶೋಧನೆಯ ಕೆಲಸವಾಗಬೇಕು

» ಚಿತ್ರದುರ್ಗ



"ಅಳಿಸಿ ಹೋಗುವುದನ್ನು ಉಳಿಸುವುದೇ ಸಂಶೋಧನೆಯಕೆಲಸವಾಗಬೇಕು"ಎಂದು ಸಂಸ್ಕೃತಿ ಚಿಂತಕರಾದ ಪ್ರೊ.ಬರಗೂರು ರಾಮಚಂದ್ರಪ್ಪ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಜಿ.ಆರ್. ಹಳ್ಳಿ ಜ್ಞಾನಗಂಗೋತ್ರಿ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಶನಿವಾರ ದಾವಣಗೆರೆ ವಿಶ್ವವಿದ್ಯಾನಿಲಯ ಕನ್ನಡ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ ಹಾಗೂ ಜ್ಞಾನ ಗಂಗೋತ್ರಿ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಕನ್ನಡ ಅಧ್ಯಯನ ವಿಭಾಗದ ವತಿಯಿಂದ "ಕನ್ನಡ ಸಾಹಿತ್ಯ ಸಂಶೋಧನೆಯ ಹೊಸ ಸಾಧ್ಯತೆಗಳು" ಎಂಬ ವಿಷಯದ ಕುರಿತು ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.

ಸಂಘಟಿತ ವಲಯದಿಂದ ಅಸಂಘಟಿತ ವಲಯಕ್ಕೆ ಸ್ಥಿತ್ಯಂತರಗೊಳ್ಳಬೇಕಾದ ಕಾಲದಲ್ಲಿ ನಾವಿದ್ದೇವೆ. ಸಂಘಟಿತ ವಲಯದ ಸಂಶೋಧನೆಗಳು ಸಾಕಷ್ಟು ನಡೆಯುತ್ತಿದ್ದು, ಇದು ಸ್ವಾಗತಾರ್ಹ. ಆದರೆ ಸಂಘಟಿತ ವಲಯದಿಂದ ಅಸಂಘಟಿತ ವಲಯಕ್ಕೆ ಸಂಶೋಧನೆ ಸ್ಥಿತ್ಯಂತರ, ವಿಸ್ತರಣೆಗೊಳ್ಳಬೇಕಾಗಿದೆ. ಇದು ಹೊಸ ಸವಾಲು ಹಾಗೂ ಹೊಸ ಸಾಧ್ಯತೆಯೂ ಹೌದು ಎಂದು ಅಭಿಪ್ರಾಯ ವ್ಯಕ್ತಪಡಿಸಿದ ಅವರು, ಬರೀ ಹೂವು ನೋಡಿ ಬಹಳ ಸುಂದರವಾಗಿದೆ ಎಂದರೆ ಸಾಲದು, ತನ್ನ ಜೀವನವನ್ನೇ ತೇದು ಹೂವು ಮಾಡಿದ ಮೊಳಕೆಯನ್ನೂ ಜ್ಞಾಪಿಸಿಕೊಳ್ಳಬೇಕು. ಇದು ಮನುಷ್ಯನಿಗೆ ಇರುವ ಜವಾಬ್ದಾರಿ. ಹಾಗೆಯೇ ಸಂಶೋಧನೆಯು ಹಾಗೂ ಸಾಹಿತ್ಯ ಸೃಷ್ಟಿಯೂ ಸಹ ಹೂವಿನಿಂದ ಮೊಳಕೆವರೆಗೂ ಬರಬೇಕಾಗಿದೆ ಎಂದರು. ಸಾಮಾಜಿಕ, ಆರ್ಥಿಕ ಸಂರಚನೆಗೂ ಹಾಗೂ ಸಾಹಿತ್ಯ ಸೃಷ್ಟಿ, ಸಂಶೋಧನೆಗೆ ಸಂಬಂಧ ಇದೆ. ಸಾಮಾಜಿಕ ಮತ್ತು ಆರ್ಥಿಕ ಸಂರಚನೆಯ ಬೆಳವಣಿಗೆಗಳು ಸಾಹಿತ್ಯ, ಸಂಶೋಧನೆಯ ಮೇಲೆ ಪರಿಣಾಮ ಬೀರುತ್ತವೆ. ಆ ಸಂರಚನೆಯಯಲ್ಲಿಯೇ ಶ್ರೇಣಿಗಳಿರುತ್ತವೆ. ಕೆಲವು ಶ್ರೇಣಿಗಳು ನಮಗೆ ಎದ್ದು ಕಾಣಿಸುತ್ತವೆ ಅದನ್ನು ನಾವು ಪ್ರಧಾನ ಎಂದು ಭಾವಿಸುತ್ತೇವೆ. ಇನ್ನೂ ಕೆಲವು ಕಾಣಿಸುವುದಿಲ್ಲ ಅದನ್ನು ಅಧೀನ ಎಂದು ತಿಳಿದುಕೊಳ್ಳುತ್ತೇವೆ. ಸಾಮಾಜಿಕ, ಆರ್ಥಿಕ ಸಂರಚನೆಯ ತಿಳುವಳಿಕೆ ಇದ್ದರೆ ಆ ತಿಳುವಳಿಕೆ ಮೂಲಕ ಸಾಹಿತ್ಯವನ್ನು ಬೇರೆ ಬೇರೆ ಆಯಾಮಗಳಿಂದ ಅರ್ಥ ಮಾಡಿಕೊಳ್ಳಲು ಸಾಧ್ಯ. ಅದು ಸಂಶೋಧನೆಯಲ್ಲೂ ಫಲಿತವಾಗಲು ಸಾಧ್ಯವಾಗಲಿದೆ ಎಂದರು.

ಬುಡಕಟ್ಟು ಸಂಶೋಧನೆ, ಅಲೆಮಾರಿ ಬದುಕು, ದಲಿತ ಲೋಕ, ಮಹಿಳಾ ಲೋಕ ಸೇರಿದಂತೆ ಅಲಕ್ಷಿತವಾದ ಲೋಕ ಹೊರಗಡೆ ಬರುವ ಮುಖಾಂತರ ದೇಶದಲ್ಲಿ ನಡೆದ ದೊಡ್ಡ ಬೆಳವಣಿಗೆ ಅಂದರೆ ಬಹು ಸಂಸ್ಕೃತಿಯ ಅನಾವರಣ. ನಮ್ಮ ದೇಶ ಏಕ ಸಂಸ್ಕೃತಿಯ ದೇಶವಲ್ಲ, ಇದು ಬಹುಸಂಸ್ಕೃತಿಯ ದೇಶ, ಬಹು ಬದುಕು, ಬಹು ವಿನ್ಯಾಸಗಳ ದೇಶ. ನಮ್ಮಲ್ಲಿ ಬುಡಕಟ್ಟು, ಅಲೆಮಾರಿಗಳ ಸಂಶೋಧನೆ ಶುರುವಾದ ನಂತರ ಏಕ ಸಂಸ್ಕೃತಿಯ ಮಿಥ್ಯವನ್ನು ಹೊಡೆದು ಹಾಕಲಾಯಿತು. ಇದು ಅಲಕ್ಷಿತ ಸಂಶೋಧನೆಯ ಫಲ ಹಾಗೂ ಈ ದೇಶದಲ್ಲಿ ನಡೆದ ಬಹುದೊಡ್ಡ ಪಲ್ಲಟವಾಗಿದ್ದು, ಪ್ರಜಾಸತ್ತಾತ್ಮಕ ಮೌಲ್ಯ, ಪ್ರಜಾಸತ್ತಾತ್ಮಕ ಸಮಾಜಕ್ಕೆ ದೊಡ್ಡ ಕೊಡುಗೆ ಎಂದು ಹೇಳಿದರು.

ಸಾಹಿತ್ಯ ಕ್ಷೇತ್ರದವರಿಗೆ, ಸಂಶೋಧನೆಗೆ ಅಂತಃಶಿಸ್ತೀಯ ತಿಳಿವಳಿಕೆಯ ಅಗತ್ಯವಿದೆ. ಚರಿತ್ರೆ, ಸಮಾಜಶಾಸ್ತ್ರ, ರಾಜಕೀಯ ಶಾಸ್ತ್ರ, ಅರ್ಥಶಾಸ್ತ್ರ, ಸಮಾಜ ಸಂರಚನೆಯ ತಿಳುವಳಿಕೆ ಇದ್ದಲ್ಲಿ, ಇಂತಹ ಸಾಹಿತ್ಯ ಏಕೆ ರಚನೆಯಾಗಿದೆ ಎಂಬುವುದು ಮನವರಿಕೆಯಾಗಲಿದೆ. ಹಾಗಾಗಿ ಸಾಹಿತ್ಯ ಕ್ಷೇತ್ರದವರಿಗೆ ಅಂತಃಶಿಸ್ತೀಯ ತಿಳುವಳಿಕೆ ಬಹಳ ಮುಖ್ಯವಾಗಿದೆ ಎಂದು ಹೇಳಿದರು.

ಸಂಶೋಧನೆ, ವಿಮರ್ಶೆ ಓದು ಪೂರ್ವಗ್ರಹ ಹಾಗೂ ಪಕ್ಷಪಾತ ರಹಿತವಾಗಿರಬೇಕು. ಸಂಶೋಧನೆ, ವಿಮರ್ಶೆ ಮಾಡುವವರಿಗೆ ಜಾತಿ, ಧರ್ಮ, ಪಕ್ಷ, ಪಂಥ ಇವೆಲ್ಲವನ್ನೂ ಮೀರಿದ ಮನಸ್ಥಿತಿ ಇರಬೇಕು. ಈ ಸೂಕ್ಷ್ಮವನ್ನು ಸಾಧಿಸುವವನೇ ಸಂಶೋಧನೆ ಹಾಗೂ ವಿಮರ್ಶೆಯ ಹೊಸ ಸಾಧ್ಯತೆಗಳನ್ನು ಹುಡುಕಲು ಸಾಧ್ಯ. ಕಂಡುಕೊಳ್ಳುವ ಕ್ರಿಯೆ ಎಷ್ಟರ ಮಟ್ಟಿಗೆ ಜಾಗೃತವಾಗಿರುತ್ತದೆಯೋ ಅಷ್ಟರ ಮಟ್ಟಿಗೆ ಸಂಶೋಧನೆ, ವಿಮರ್ಶೆಯ ಸಾಧ್ಯತೆಗಳು ಹೆಚ್ಚಾಗುತ್ತಾ ಹೋಗುತ್ತದೆ. ಹಾಗಾಗಿ ನಾವು ಕೊಂಡುಕೊಳ್ಳುವುದಕ್ಕೆ ಮಾತ್ರ ಮೀಸಲಾಗದೇ ಕಂಡುಕೊಳ್ಳುವ ಮನುಷ್ಯರಾಗೋಣ ಎಂದು ಹೇಳಿದರು.

ಶಿಕ್ಷಣದಿಂದ ಸಾಹಿತ್ಯ, ಸಂಶೋಧನೆ ವಿಸ್ತರಣೆ: ಶಿಕ್ಷಣ ವಿಸ್ತರಣೆಯಾದಂತೆ ಸಾಹಿತ್ಯ, ವಿಮರ್ಶೆ, ಸಂಶೋಧನೆಯ ವಿಸ್ತರಣೆಯೂ ಆಯಿತು. ಈ ಹಿನ್ನಲೆಯಲ್ಲಿ ಶಿಕ್ಷಣವು ಹಟ್ಟಿ, ಹಾಡಿ, ಗುಡಿಸಲು, ಮಣ್ಣಿನ ಮನೆ, ಮಹಿಳೆಯರಿಗೆ ಶಿಕ್ಷಣ ಬಂತು. ಹಟ್ಟಿಗೆ ಶಿಕ್ಷಣ ಬಂದ ಮೇಲೆ ಆತಂಕ, ಆಕ್ರೋಶ ಹೊರಬರಲು ಶುರುವಾಯಿತು. ಹಾಡುಗಳಿಂದ ಅದರ ಪಾಡುಗಳು, ಮಣ್ಣಿನ ಮನೆಯಿಂದ ಮನದಾಳ, ಮಹಿಳೆಯರಿಗೆ ಶಿಕ್ಷಣ ತಲುಪಿದ ನಂತರ ಇನ್ನೊಂದು ಆಯಾಮವೇ ಸಾಹಿತ್ಯದಲ್ಲಿ ಸೃಷ್ಟಿಯಾಯಿತು. ಹಾಗಾಗಿ ಶಿಕ್ಷಣದಿಂದ ಮಹಿಳಾ ಲೋಕ, ಬುಡಕಟ್ಟು ಲೋಕ, ಅಲೆಮಾರಿ ಲೋಕ ಸಾಹಿತ್ಯ ಸಂಸ್ಕೃತಿ ಸೇರಿದಂತೆ ಬೇರೆ ಬೇರೆ ಲೋಕ ಅನಾವರಣಕ್ಕೆ ಕಾರಣವಾಯಿತು ಎಂದರು.ಸಾಹಿತ್ಯ ಸಂಶೋಧನೆ, ವಿಮರ್ಶೆ ಒಂದರೊಳಗೊಂದು ಸೇರಿಕೊಂಡಿರುವುದನ್ನು ನಾವು ನೋಡುತ್ತಿದ್ದೇವೆ. ಸಾಹಿತ್ಯ ಸಂಶೋಧನೆಗೆ ವಿಮರ್ಶೆಯ ವಿವೇಕ ಬೇಕಾಗಿದೆ. ಆದರೆ ವಿಮರ್ಶೆ ಎಲ್ಲವೂ ಸಂಶೋಧನೆ ಆಗಬೇಕಾಗಿರುವುದಿಲ್ಲ. ಸಂಶೋಧನೆ ಅಂದರೆ ಅಜ್ಞಾತಗಳ ಹುಡುಕಾಟ. ವಿಮರ್ಶೆ ಎನ್ನುವುದು ವ್ಯಾಖ್ಯಾನಗಳ ಒಕ್ಕೂಟ ಎಂದು ಬರಗೂರು ರಾಮಚಂದ್ರಪ್ಪ ಹೇಳಿದರು.

ಜಿ.ಆರ್.ಹಳ್ಳಿ ಸ್ನಾತಕೋತ್ತರ ಕನ್ನಡ ಅಧ್ಯಯನಕೇಂದ್ರದಸಹಾಯಕಪ್ರಾಧ್ಯಾಪಕ ಡಾ. ಎಚ್.ಜಿ. ವಿಜಯಕುಮಾರ್ ಮಾತನಾಡಿ, "ಕನ್ನಡ ಸಾಹಿತ್ಯ ಸಂಶೋಧನೆಯ ಹೊಸ ಸಾಧ್ಯತೆಗಳು" ಎಂಬ ವಿಷಯಕ್ಕೆ ಸಂಬಂಧಪಟ್ಟಂತೆ ಲೇಖನಗಳನ್ನು ಆಹ್ವಾನಿಸಿ, 210 ಜನ ವಿದ್ವಾಂಸರು, ಸಂಶೋಧಕರು ಲೇಖನಗಳನ್ನು ಕಳಿಸಿದ್ದು, ಇವುಗಳನ್ನು "ನವನೀತ" ಎಂಬ ಶೀರ್ಷಿಕೆಯಡಿಯಲ್ಲಿ ಬೃಹತ್ ಗ್ರಂಥ ಪ್ರಕಟಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಸಂಶೋಧನೆಯ ಹೊಸ ಸಾಧ್ಯತೆಗಳ ಎಂಬ ವಿಷಯಕ್ಕೆ ಸಂಬಂಧಪಟ್ಟಂತೆ ಲೇಖನಗಳ ಒಳಗೊಂಡ "ನವನೀತ" ಬೃಹತ್ ಗ್ರಂಥವನ್ನು ಲೋಕಾರ್ಪಣೆಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ದಾವಣಗೆರೆ ವಿಶ್ವವಿದ್ಯಾಲಯ ಕುಲಪತಿ ಪ್ರೊ.ಬಿ.ಡಿ.ಕುಂಬಾರ, ವಿಶ್ರಾಂತಿ ಕುಲಪತಿ ಪ್ರೊ.ಮಲ್ಲೇಪುರಂ ಜಿ.ವೆಂಕಟೇಶ್, ಕುವೆಂಪು ವಿಶ್ವವಿದ್ಯಾಲಯ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ನಿರ್ದೇಶಕ ಡಾ.ನೆಲ್ಲಿಕಟ್ಟೆ ಎಸ್ ಸಿದ್ದೇಶ್, ಜಿ.ಆರ್.ಹಳ್ಳಿ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಸಂಯೋಜನಾಧಿಕಾರಿ ಪ್ರೊ. ಎಂ.ಯು.ಲೋಕೇಶ್, ದಾವಣಗೆರೆ ವಿಶ್ವವಿದ್ಯಾಲಯ ಕನ್ನಡ ಅಧ್ಯಯನ ವಿಭಾಗ ಅಧ್ಯಕ್ಷ ಡಾ.ವಿ.ಜಯರಾಮಯ್ಯ, ಶಿಕಾರಿಪುರ ಸುವ್ವಿ ಪಬ್ಲಿಕೇಷನ್ ಪ್ರಕಾಶಕ ಬಿ.ಎನ್.ಸುನೀಲ್ ಕುಮಾರ್, ತುಮಕೂರು ವಿಶ್ವವಿದ್ಯಾಲಯಪ್ರಾಧ್ಯಾಪಕಿಗೀತಾವಸಂತ, ಸರ್ಕಾರಿ ಕಲಾ ಕಾಲೇಜು ಸ್ನಾತಕೋತ್ತರ ಕನ್ನಡ ಅಧ್ಯಯನ ಕೇಂದ್ರದ ಸಹಾಯಕ ಪ್ರಾಧ್ಯಾಪಕ ಡಾ.ಜೆ.ಕರಿಯಪ್ಪ ಮಾಳಿಗೆ ಸೇರಿದಂತೆ ಮತ್ತಿತರರು ಇದ್ದರು.

## ಎನ್‌ಪಿಎಸ್ ರದ್ದುಗೊಳಿಸಿ ಒಪಿಎಸ್ ಜಾರಿಗೆ ಒತ್ತಾಯ

» ಚಳ್ಳಕೆರೆ



ರಾಜ್ಯದ ಅನುದಾನಿತ ಶಾಲಾ, ಕಾಲೇಜುಗಳ ಪಿಂಚಣಿ ವಂಚಿತ ನೌಕರರ ಸಂಘದ ವತಿಯಿಂದ ಎನ್‌ಪಿಎಸ್‌ನ್ನು ರದ್ದುಗೊಳಿಸಿ ಒಪಿಎಸ್‌ನ್ನು ಜಾರಿಗೊಳಿಸುವಂತೆ ಒತ್ತಾಯಿಸಿ ಮಾನ್ಯ ಮುಖ್ಯಮಂತ್ರಿಗಳಿಗೆ ತಹಶೀಲ್ದಾರ್ ಮೂಲಕ ಮನವಿ ನೀಡಲಾಯಿತು ಎಂದು ತಾಲ್ಲೂಕು ಅಧ್ಯಕ್ಷ ಪಿ.ನಾಗರಾಜು ತಿಳಿಸಿದರು.

ರಾಜ್ಯಸರ್ಕಾರ ಈಗಾಗಲೇ ಸರ್ಕಾರಿ ನೌಕರರಿಗೆ ಒಪಿಎಸ್ ಪದ್ದತಿಯನ್ನು ಜಾರಿಗೊಳಿಸುವ ಭರವಸೆ ನೀಡತ್ತು. ಆದರೆ, ಚುನಾವಣೆ ಮುಗಿದು 14 ತಿಂಗಳ ಅಧಿಕಾರಿ ನಡೆಸಿದರೂ ಸರ್ಕಾರ ಈ ಬಗ್ಗೆ ಗಮನಹರಿಸುತ್ತಿಲ್ಲ. ಒಪಿಎಸ್ ಜಾರಿ ವಿಳಂಬ ಸಹಿಸಲು ಸಾಧ್ಯವಿಲ್ಲ. ಆದ್ದರಿಂದ ಕೂಡಲೇ ಮಾನ್ಯ ಮುಖ್ಯಮಂತ್ರಿಗಳು ತಾವು ಈ ಹಿಂದೆ ನೀಡಿದ ಭರವಸೆಯಂತೆ ಒಪಿಎಸ್ ಜಾರಿಗೆ ಮುಂದಾಗಬೇಕೆಂದು ಮನವಿ ಮಾಡಿದ್ದಾರೆ.

ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಮಾಜಿ ತಾಲ್ಲೂಕು ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ ಮಾತನಾಡಿ, ರಾಜ್ಯಾದ್ಯಂತ ಲಕ್ಷಾಂತರ ನೌಕರರು ಒಪಿಎಸ್ ಜಾರಿ ಮಾಡುವಂತೆ ಒತ್ತಾಯಿಸಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ. ಮಾನ್ಯ ಮುಖ್ಯಮಂತ್ರಿಗಳು ತಾವು ಈ ಹಿಂದೆ ನೀಡಿದ ಭರವಸೆಯನ್ನು ಮರೆತು ಯಾವುದೇ ಕ್ರಮವಹಿಸುತ್ತಿಲ್ಲ. ಆದ್ದರಿಂದ ಇಂದು ತಾಲ್ಲೂಕು ಮಟ್ಟದಲ್ಲಿ ಮನವಿ ನೀಡುವ ಮೂಲಕ ಒತ್ತಾಯ ಪಡಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಉಗ್ರಹೋರಾಟ ಮಾಡುವ ಎಚ್ಚರಿಕೆ ನೀಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, ಒಪಿಎಸ್ ಜಾರಿ ಮಾಡುವಂತೆ ಒತ್ತಾಯಿಸಿ ತಾವು ಮುಖ್ಯಮಂತ್ರಿಗಳಿಗೆ ನೀಡಿದ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು.

## ಡಾ.ಬಾಬು ಜಗಜೀವನ್ ರಾಂ ಅವರ 38ನೇ ಪುಣ್ಯಸ್ಮರಣೆ



» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಬಾಬು ಜಗಜೀವನ ರಾಂ ರವರ 38 ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ಪುಷ್ಪ ನಮನ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಯಾತ್ ಮುಖ್ಯಕಾರ್ಯನಿರ್ವಾಹಕ ಆಧಿಕಾರಿ ಸುರೇಶ್ ಬಿ.ಇಟ್ನಾಳ್, ಉಪವಿಭಾಗಧಿಕಾರಿ ದುರ್ಗಶ್ರೀ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರಾದ ಕೆ. ನಾಗರಾಜ್, ಹರಿಜನ ಯುವಕರ ಸಂಘದ ಕಾರ್ಯದರ್ಶಿ ಸೋಮ್ಲಾಪುರ ಹನುಮಂತಪ್ಪ ಉಪಸ್ಥಿತರಿದ್ದರು

**ಪ್ರಮುಖ ಸುದ್ದಿ**

# ಶಿಕ್ಷಣದಿಂದ ಮಾತ್ರ ಮಕ್ಕಳಲ್ಲಿ ಸಂಸ್ಕಾರ: ಸ್ವಾಮೀಜಿ

» ಚಿತ್ರದುರ್ಗ



ಪ್ರಜಾಪ್ರಭುತ್ವದಲ್ಲಿ ಸಂವಿಧಾನ ನೀಡಿರುವ ಸೌಲಭ್ಯವನ್ನು ಬಳಸಿಕೊಂಡು ಜೀವನದಲ್ಲಿ ಮುಂದೆ ಬರಬೇಕೆಂದು ಹೊಸದುರ್ಗ ಭಗೀರಥ ಪೀಠದ ಡಾ. ಪುರುಷೋತ್ತಮಾನಂದಪುರಿ ಸ್ವಾಮೀಜಿ ಉಪ್ಪಾರ ಜನಾಂಗಕ್ಕೆ ಕರೆ ನೀಡಿದರು.

ಮೆದೇಹಳ್ಳಿ ರಸ್ತೆಯಲ್ಲಿರುವ ಶಿವಮೂರ್ತಿ ಶಿವಾಚಾರ್ಯ ಲೇಔಟ್ ಪಕ್ಕದ ಮೈದಾನದಲ್ಲಿ ತಾಲ್ಲೂಕು ಉಪ್ಪಾರ ಸಂಘದಿಂದ ಭಾನುವಾರ ಏರ್ಪಡಿಸಲಾಗಿದ್ದ ಭಗೀರಥ ಜಯಂತಿ, ತಾಲ್ಲೂಕು ಸಂಘದ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಬಡತನ, ಅನಕ್ಷರತೆ, ಮೌಢ್ಯತೆಯಿರುವ ಸಮಾಜ ಮುಂದೆ ಬರಲು ಸಾಧ್ಯವಿಲ್ಲ. ಶಿಕ್ಷಣದಿಂದ ಮಾತ್ರ ಮಕ್ಕಳಲ್ಲಿ ಸಂಸ್ಕಾರ, ಸಂಸ್ಕೃತಿ,ಗುರು–ಹಿರಿಯರನ್ನು ಗೌರವಿಸುವ ಗುಣ ಬೆಳೆಯುತ್ತದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ವಿದ್ಯಾವಂತರಾಗುವ ಮೂಲಕ ಜೀವನದಲ್ಲಿ ಸುಧಾರಣೆ ಕಂಡುಕೊಳ್ಳಬಹುದು. ಸಂಸ್ಕಾರವಿಲ್ಲದ ಶಿಕ್ಷಣದಿಂದ ಪ್ರಯೋಜನವಿಲ್ಲ ಎಂದು ಹೇಳಿದರು.

ತಂದೆ–ತಾಯಿಗಳು ಮಕ್ಕಳಿಗೆ ಆಸ್ತಿ ಮಾಡುವ ಬದಲು ಶಿಕ್ಷಣ ಕೊಡಿಸಿದರೆ ಅದುವೆ ನಿಜವಾದ ಸಂಪತ್ತು. ಶಿಕ್ಷಣದಿಂದ ಮೃಗೀಯ ಗುಣ ಹೋಗಲಾಡಿಸಿ ಮನುಷ್ಯತ್ವ ಬೆಳೆಸಿಕೊಳ್ಳಬಹುದು. ಸತ್ಯ, ಧರ್ಮ, ನ್ಯಾಯವನ್ನು ಜೀವನದಲ್ಲಿ ಅಳವಡಿಸಿಕೊಂಡವರಿಗೆ ಮನುಷ್ಯರೆಂದು ಹೇಳುತ್ತಾರೆ. ಯಾರು ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳುತ್ತಾರೋ ಅಂತಹವರು ಗೌರವಕ್ಕೆ ಪಾತ್ರರಾಗುತ್ತಾರೆ. ಧರ್ಮ ಕಾರ್ಯ, ಪರೋಪಕಾರದಲ್ಲಿ ತೊಡಗಿಕೊಂಡು ಸನ್ಮಾರ್ಗದಲ್ಲಿ ನಡೆಯಬೇಕಿದೆ ಎಂದು ಉಪ್ಪಾರ ಸಮಾಜಕ್ಕೆ ತಿಳಿಸಿದರು.

ಅಸಾಧ್ಯವಾದುದನ್ನು ಸಾಧನೆ ಮಾಡಿದರೆ ಭಗೀರಥ ಅಪ್ರಯತ್ನವಾಗುತ್ತದೆ. ಕಠಿಣ ತಪಸ್ಸಿನ ಮೂಲಕ ಭಗೀರಥರು ಗಂಗೆಯನ್ನು ಧರೆಗಿಳಿಸಿದರು. ಅಂತಹ ಶಕ್ತಿ ಅವರಲ್ಲಿತ್ತು. ಹಾಗಾಗಿ ಉಪ್ಪಾರ ಜನಾಂಗ ಮನಸ್ಸು ಮಾಡಿದರೆ ಅಸಾಧ್ಯವಾದುದು ಯಾವುದು ಇಲ್ಲ. ಸಂವಿಧಾನಶಿಲ್ಪಿ ಡಾ.ಅಂಬೇಡ್ಕರ್ ಹೇಳಿರುವಂತೆ ಶಿಕ್ಷಣ, ಸಂಘಟನೆ, ಹೋರಾಟಕ್ಕೆ ಶಕ್ತಿಯಿದೆ ಎಂದರು. ಕಬೀರಾನಂದಾಶ್ರಮದ ಶಿವಲಿಂಗಾನಂದ ಸ್ವಾಮಿಗಳು ಮಾತನಾಡಿ ಉಪ್ಪಾರ ಜನಾಂಗದವರು ಮಕ್ಕಳನ್ನು ಬುದ್ದಿವಂತರಾನ್ನಾಗಿ ಮಾಡಬೇಕಾದರೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಬೇಕು. ಶಿಕ್ಷಣದಿಂದ ಮಾತ್ರ ಸಂಸ್ಕಾರ, ಸಂಸ್ಕೃತಿ, ಮಾನವೀಯ ಗುಣ, ಗುರು–ಹಿರಿಯರು, ತಂದೆ–ತಾಯಿಗಳನ್ನು ಗೌರವಿಸುವುದನ್ನು ಮಕ್ಕಳು ಕಲಿಯುತ್ತಾರೆ. ವಿನಯವಿಲ್ಲದ ಶಿಕ್ಷಣದಿಂದ ಏನೂ ಪ್ರಯೋಜನವಿಲ್ಲ. ಇತ್ತೀಚಿನ ದಿನಗಳಲ್ಲಿ ವೃದ್ದಾಶ್ರಮಗಳು ಜಾಸ್ತಿಯಾಗುತ್ತಿರುವುದು ನೋವಿನ ಸಂಗತಿ. ಮಕ್ಕಳು ವಯಸ್ಸಾದ ಅಪ್ಪ–ಅಮ್ಮನನ್ನು ಜೋಪಾನವಾಗಿ ನೋಡಿಕೊಳ್ಳಬೇಕು ಎಂದು ಹೇಳಿದರು. ಭಗೀರಥರಿಗೆ ಅಗಾಧವಾದ ಶಕ್ತಿಯಿದ್ದುದರಿಂದ ಕಠಿಣ ತಪಸ್ಸಿನಿಂದ ಗಂಗೆಯನ್ನು ಧರೆಗಿಳಿಸಿದರು. ಅಂತಹ ಪರಂಪರೆಗೆ ಸೇರಿರುವ ಉಪ್ಪಾರ ಜನಾಂಗ ಸಾಧನೆಯ ಮೂಲಕ ಜೀವನದಲ್ಲಿ ಯಶಸ್ಸು ಕಂಡುಕೊಳ್ಳಬಹುದು ಎಂದು ತಿಳಿಸಿದರು. ಚಳ್ಳಕೆರೆ ನರಹರಿ ಆಶ್ರಮದ ರಾಜಾರಾಂ ಗುರುಗಳು ಮಾತನಾಡುತ್ತ ತಾಯಿ, ಪಿತೃ, ಆಚಾರ್ಯ ಹಾಗೂ ಸಮಾಜದ ಋಣವನ್ನು ಯಾರಿಂದಲೂ ತೀರಿಸಲು ಆಗುವುದಿಲ್ಲ. ಹುಟ್ಟಿದ ಪ್ರತಿಯೊಬ್ಬರು ಈ ನಾಲ್ಕು ಋಣಗಳನ್ನು ತೀರಿಸಲೇಬೇಕು. ತಂದೆ–ತಾಯಿಗಳನ್ನು ಮಕ್ಕಳು ಪ್ರೀತಿಯಿಂದ ನೋಡಿಕೊಂಡರೆ ಅದುವೆ ನೀವುಗಳು ಅವರಿಗೆ ಕೊಡುವ ಗೌರವ. ಮುಪ್ಪಿನ ಕಾಲದಲ್ಲಿ ಹೆತ್ತವರನ್ನು ದೂರ ಮಾಡುವ ಸಂಸ್ಕೃತಿ ಮಕ್ಕಳಿಗೆ ಒಳ್ಳೆಯದಲ್ಲ. ಉಪ್ಪಾರ ಜನಾಂಗ ಸದೃಢವಾಗಿ ಬೆಳೆಯಬೇಕಾದರೆ ಮಕ್ಕಳನ್ನು ಶಿಕ್ಷಣವಂತರನ್ನಾಗಿಸಿ ಎಂದು ಹೇಳಿದರು. ತಾಲ್ಲೂಕು ಉಪ್ಪಾರ ಸಂಘದ ಅಧ್ಯಕ್ಷ ಎಸ್.ಸಿದ್ದೇಶ್ವರ ಅಧ್ಯಕ್ಷತೆ ವಹಿಸಿದ್ದರು.

ಉಪ್ಪಾರ ಸಂಘದ ಜಿಲ್ಲಾಧ್ಯಕ್ಷ ಎನ್.ವೀರೇಶ್, ತಾಲ್ಲೂಕು ಸಂಘದ ಉಪಾಧ್ಯಕ್ಷ ಎನ್.ಎಸ್.ರವಿ, ಕಾರ್ಯದರ್ಶಿ ಟಿ.ಈಶ್ವರಪ್ಪ, ಜಿಲ್ಲಾ ಕಾರ್ಯದರ್ಶಿ ಮಹೇಶ್, ಖಜಾಂಚಿ ಅಜ್ಜಪ್ಪ, ಬಸವರಾಜ್, ತಿಮ್ಮಣ್ಣ, ಜಿಲ್ಲಾ ಉಪ್ಪಾರ ಸಮಾಜದ ಮಾಜಿ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಗ್ಯಾರೆಂಟಿ ಅನುಷ್ಠಾನಗಳ ಸಮಿತಿ ಅಧ್ಯಕ್ಷ ಆರ್.ಶಿವಣ್ಣ, ಮೆದೇಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಎಂ.ಜಿ.ಜಯರಾಮರೆಡ್ಡಿ ಸೇರಿದಂತೆ ಉಪ್ಪಾರ ಸಂಘದ ಪದಾಧಿಕಾರಿಗಳು ವೇದಿಕೆಯಲ್ಲಿದ್ದರು. ಹತ್ತನೆ ತರಗತಿ ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಗಳಿಸಿರುವ ವಿದ್ಯಾರ್ಥಿಗಳು ಹಾಗೂ ಉಪ್ಪಾರ ಸಮಾಜದಲ್ಲಿ ಸಾಧನೆಗೈದಿರುವವರನ್ನು ಗುರುತಿಸಿ ಸನ್ಮಾನಿಸಲಾಯಿತು.

## ಫಾಸ್ಟ್ ನ್ಯೂಸ್

### ಎಲ್ಲಾ ವರ್ಗದ ಜನರಿಗೆ ಕೇಂದ್ರ ಸಹಕಾರಿ ಬ್ಯಾಂಕ್ ನೆರವು ನೀಡಲು ಮುಂದಾಗಿರುವುದು ಸಂತಸ: ಡಿ.ಸುಧಾಕರ್.



» ಚಳ್ಳಕೆರೆ

ಕಳೆದ ಹಲವಾರು ದಶಕಗಳಿಂದ ಚಳ್ಳಕೆರೆ ತಾಲ್ಲೂಕು ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳ ರೈತರಿಗೆ ಕೇಂದ್ರ ಸಹಕಾರಿ ಬ್ಯಾಂಕ್ ತನ್ನದೇಯಾದ ನಿಯಮಗಳಡಿ ಆರ್ಥಿಕ ಸಹಕಾರ ನೀಡುತ್ತಾ ಬಂದಿದೆ. ಬ್ಯಾಂಕ್‌ನಿಂದ ಪಡೆದ ಸಾಲವನ್ನು ಸಕಾಲದಲ್ಲಿ ಮರುಪಾವತಿಸಿದರೆ ವೇಗದ ಆರ್ಥಿಕ ಅಭಿವೃದ್ದಿ ಕಾಣಲು ಸಾಧ್ಯವಾಗುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಡಿ.ಸುಧಾಕರ್ ತಿಳಿಸಿದರು. ಅವರು, ತಾಲ್ಲೂಕಿನ ತಳಕು ಗ್ರಾಮದಲ್ಲಿ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ನ ನೂತನ ಶಾಖೆಯನ್ನು ಉದ್ಘಾಟಿಸಿ ಮಾತನಾಡಿದರು. ಗ್ರಾಮೀಣ ಭಾಗದಲ್ಲಿ ಕೇಂದ್ರ ಸಹಕಾರಿ ಬ್ಯಾಂಕ್ ತನ್ನ ಕಾರ್ಯಚಟುವಟಿಕೆಗಳನ್ನು ವಿಸ್ತರಿಸುವ ಮೂಲಕ ಎಲ್ಲಾ ಜನಸಾಮಾನ್ಯರಿಗೆ ನೆರವು ನೀಡಲು ಮುಂದಾಗಿದೆ. ಸರ್ಕಾರವೂ ಸಹ ವಿವಿಧ ಯೋಜನೆಗಳಲ್ಲಿ ಹಣವನ್ನು ನೀಡುವ ಭರವಸೆ ಇದೆ ಎಂದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಡಿಸಿಸಿ ಬ್ಯಾಂಕ್ ನಿರ್ದೇಶಕ, ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಹೆಚ್ಚಿನ ರೈತರಿಗೆ ನೆರವು ನೀಡುವಲ್ಲಿ ಮುಂದಾಗಿರುವುದು ಸಂತಸ ಸಂಗತಿ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಈ ಭಾಗದಲ್ಲೂ ಹೆಚ್ಚಿನ ಜನರ ವಿಶ್ವಾಸವನ್ನು ಗಳಿಸಿದ್ದು, ಇಲ್ಲಿ ಶಾಖೆ ಮಾಡಲು ಸಹಕಾರಿ ದುರೀಣರ ಸಹಕಾರವೇ ಕಾರಣವೆಂದರು.

ಕಾರ್ಯಕ್ರಮದಲ್ಲಿ ಡಿಸಿಸಿಬ್ಯಾಂಕ್ ಎಂ.ಡಿ ಇಲ್ಯಾಸ್‌ವುಲ್ಲಾ ಶರೀಫ್, ನಿರ್ದೇಶಕ ಸಿ.ವೀರಭದ್ರಬಾಬು ಮುಂತಾದವರು ಭಾಗವಹಿಸಿದ್ದರು.

### ಶ್ರೀಕ್ಷೇತ್ರದ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯಿಂದ ಮಹಿಳಾ ಸಬಲೀಕರಣ ಸಾಧ್ಯ : ನೇತಾಜಿಪ್ರಸನ್ನ.



» ಚಳ್ಳಕೆರೆ

ಶ್ರೀಕ್ಷೇತ್ರದ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯಿಂದ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಪ್ರೇರಣೆ ನೀಡಿದೆ. ಸ್ವಸಹಾಯ ಗುಂಪುಗಳು ಯೋಜನೆಯಿಂದ ಸಾಲವನ್ನು ಪಡೆದು ಹಲವಾರು ಉದ್ದಿಮೆಗಳನ್ನು ಪ್ರಾರಂಭಿಸಿ ಆರ್ಥಿಕವಾಗಿ ಬಲಗೊಳ್ಳಬೇಕೆಂದು ರೂಟ್‌ಶೆಟ್ ಸಂಸ್ಥೆಯ ನಿರ್ದೇಶಕ ಉದಯಕುಮಾರ್ ತಿಳಿಸಿದರು. ಅವರು, ಅಂಬೇಡ್ಕರ್ ನಗರದಲ್ಲಿ ಕಸಬಾ ವಲಯದ ಜ್ಞಾನಭಾರತಿ ವಿಕಾಸ ಕೇಂದ್ರದಲ್ಲಿ ಸ್ವಯಂ ಉದ್ಯೋಗ ಪ್ರೇರಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಪ್ರತಿಯೊಂದು ಕ್ಷೇತ್ರದಲ್ಲಿ ಮಹಿಳೆ ತೊಡಗಿಕೊಳ್ಳು ಆರ್ಥಿಕ ಬಲದ ಅವಶ್ಯಕತೆ ಇದೆ. ಅದನ್ನು ಶ್ರೀಕ್ಷೇತ್ರದ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಸಾಲ ಯೋಜನೆಯ ಮೂಲಕ ಆರ್ಥಿಕ ಬಲವರ್ಧನೆಗೆ ಸಹಕಾರಿಯಾಗಿದೆ. ನಮ್ಮ ರೂಟ್‌ಶೆಟ್ ಸಂಸ್ಥೆಯಿಂದ ಸ್ವಯಂ ಉದ್ಯೋಗಕ್ಕೆ ಹಲವಾರು ತರಬೇತಿ ನೀಡಲಿದ್ದು, ಮಾರ್ಕೆಟಿಂಗ್, ಹೊಲಿಗೆ ಇನ್ನಿತರ ಸಣ್ಣಕೈಗಾರಿಕೆಗಳ ಬಗ್ಗೆ ತರಬೇತಿ ಪಡೆದು ಸ್ವಯಂ ಉದ್ದಿಮೆ ಪ್ರಾರಂಭಿಸಲು ಮುಂದಾಗಬೇಕು. ರೂಟ್‌ಶೆಟ್ ಸಂಸ್ಥೆಯಲ್ಲಿ ನೂರಾರು ಯೋಜನೆಗಳಿವೆ ಅದರ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಿ ಎಂದರು. ನಗರಸಭೆ ನಾಮನಿರ್ದೆಶಕಸದಸ್ಯನೇತಾಜಿಪ್ರಸನ್ನಮಾತನಾಡಿ, ಮಹಿಳೆರು ಸ್ವಯಂ ಉದ್ಯೋಗದ ಮೂಲಕ ಆರ್ಥಿಕ ಸಬಲೀಕರಣಗೊಳ್ಳಲು ಸಾಧ್ಯವಾಗುತ್ತದೆ. ಪುರುಷರಷ್ಟೇ ಸಾಮರ್ಥ್ಯ ಹೊಂದಿರುವ ಮಹಿಳೆ ಸಾಮಾಜಿಕ, ಆರ್ಥಿಕವಾಗಿ ಬಲಗೊಳ್ಳಲು ಶ್ರೀಕ್ಷೇತ್ರದ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಸಂಪೂರ್ಣ ಸಹಕಾರ ನೀಡುತ್ತದೆ. ಧರ್ಮಸ್ಥಳ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಸಾವಿರಾರು ಮಹಿಳೆರುವ ಹಲವಾರು ಉದ್ಯಮಗಳನ್ನು ಪ್ರಾರಂಭಿಸಿ ಆರ್ಥಿಕವಾಗಿ ಬಲಗೊಂಡಿದ್ದಾರೆ ಎಂದರು. ವಲಯ ಮೇಲ್ವಿಚಾರಕ ಸಂತೋಷ್, ಒಕ್ಕೂಟ ಅಧ್ಯಕ್ಷೆ ತಿಮ್ಮಕ್ಕ, ವಿರೂಪಾಕ್ಷಮ್ಮ ಇದ್ದರು.

#### ಅಂತರ್ ಇಲಾಖಾ ಸಮನ್ವಯ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ಡೆಂಗ್ಯೂ ನಿಯಂತ್ರಣಕ್ಕೆ ಜನರ ಸಹಕಾರ ಅತ್ಯಗತ್ಯ

» ಚಿತ್ರದುರ್ಗ

ಕೋವಿಡ್ ಸಾಂಕ್ರಮಿಕ ರೋಗ ಉಲ್ಬಣಗೊಂಡಿದ್ದ ಸಮಯದಲ್ಲಿ ನಿಯಂತ್ರಣಕ್ಕಾಗಿ ಕೈಗೊಂಡ ಕ್ರಮಗಳ ಮಾದರಿಯಲ್ಲಿ ಆರೋಗ್ಯ ಸೇರಿದಂತೆ ವಿವಿಧ ಇಲಾಖೆಗಳು ಡೆಂಗ್ಯೂ ನಿಯಂತ್ರಣಕ್ಕೂಸಮರೋಪಾದಿಯಲ್ಲಿಕ್ರಮ ಕೈಗೊಳ್ಳಬೇಕಿದ್ದು, ಇದಕ್ಕೆ ಸಾರ್ವಜನಿಕರ ಸಹಕಾರವೂ ಅತ್ಯಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶನಿವಾರ ಡೆಂಗ್ಯೂ ನಿಯಂತ್ರಣದ ಕುರಿತು ಜರುಗಿದ ಅಂತರ್ ಇಲಾಖೆ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿರುವುದು ಆಂತಕದ ಸಂಗತಿಯಾಗಿದೆ. ನಗರ ಪ್ರದೇಶ ಹಾಗೂ ಗ್ರಾಮಗಳಲ್ಲಿ ಡೆಂಗ್ಯೂ ಕುರಿತು ಜನರಲ್ಲಿ ಅರಿವು ಮೂಡಿಸುವದರೊಂದಿಗೆ, ಜಾಗರೂಕತೆಯಿಂದ ಡೆಂಗ್ಯೂ ಪ್ರಕರಣಗಳನ್ನು ನಿರ್ವಹಿಸಬೇಕು. ಯಾವುದೇ ಜೀವ ಹಾನಿ ಉಂಟಾಗದಂತೆ ಚಿಕಿತ್ಸೆ ನೀಡಬೇಕು. ಸರ್ಕಾರದ ಆದೇಶದಂತೆ ಪ್ರತಿ ಶುಕ್ರವಾರ ಆಂದೋಲನದ ಮಾದರಿಯಲ್ಲಿ ಈಡಿಸ್ ಈಜಿಪ್ಟೈ ಸೊಳ್ಳೆಗಳ ಲಾರ್ವ ನಾಶದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಹೆಚ್ಚಿನ ಪ್ರಕಣಗಳು ವರದಿಯಾದ ಸ್ಥಳಗಳಲ್ಲಿ ಮಂಗಳವಾರ ಹಾಗೂ ಶುಕ್ರವಾರ ಲಾರ್ವ ನಾಶದ ಕಾರ್ಯಕ್ರಮ ಕೈಗೊಳ್ಳಬೇಕು. ಡೆಂಗ್ಯೂ ನಿಯಂತ್ರಣ ಕಾರ್ಯಗಳ ಮೇಲ್ವಿಚಾರಣೆಗಾಗಿ ಪ್ರತಿ ತಾಲ್ಲೂಕಿಗೆ ಒಬ್ಬರು ನೋಡಲ್ ಅಧಿಕಾರಿಯನ್ನು ನೇಮಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಡೆಂಗ್ಯೂ ರೋಗಕ್ಕೆ ಯಾವುದೇ ನಿರ್ದಿಷ್ಟ ಚಿಕಿತ್ಸೆ ಇರುವುದಿಲ್ಲವಾದ್ದರಿಂದ, ಈ ರೋಗ ಬಾರದಂತೆ ಮುಂಜಾಗ್ರತಾ ಕ್ರಮ ವಹಿಸಬೇಕು, ಅಂದರೆ ಇದಕ್ಕೆ ಕಾರಣವಾಗುವ ಈಡಿಸ್ ಈಜಿಪ್ಟೈ ಸೊಳ್ಳೆಗಳು ಹುಟ್ಟುವ ಮೂಲವನ್ನೇ ಇಲ್ಲವಾಗಿಸಬೇಕು. ಸಾರ್ವಜನಿಕರು ತಮ್ಮ ಮನೆಯ ಒಳಗೆ ಹಾಗೂ ಸುತ್ತಮುತ್ತ ಎಲ್ಲೂ ಕೂಡ ನೀರು ನಿಲ್ಲದಂತೆ ನೋಡಿಕೊಂಡಲ್ಲಿ, ನೀರು ಸಂಗ್ರಹಿಸುವ ತೊಟ್ಟಿ, ಡ್ರಂ ಇತ್ಯಾದಿಗಳನ್ನು ಸೊಳ್ಳೆ ನುಸುಳದಂತೆ ಮುಚ್ಚಿಯೇ ಶೇಖರಿಸಬೇಕು, ವಾರಕ್ಕೊಮ್ಮೆ ಸ್ವಚ್ಛವಾಗಿ ತೊಳೆದು, ಒಣಗಿಸಿದ ಬಳಕವೇ ಮತ್ತೆ ನೀರು ಸಂಗ್ರಹಿಸಬೇಕು. ಹೀಗಾದಲ್ಲಿ ಮಾತ್ರ ಡೆಂಗ್ಯೂ ಅನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಸಾಧ್ಯ. ಇದಕ್ಕೆ ಸಾರ್ವಜನಿಕರು ಸ್ಥಳೀಯ ಸಂಸ್ಥೆಯೊಂದಿಗೆ ಸಹಕರಿಸುವ ಅಗತ್ಯವಿದೆ ಎಂದು ಮನವಿ ಮಾಡಿದರು.



**ತುರ್ತು ಸ್ಪಂದನೆ ಹಾಗೂ ಡೆಂಗ್ಯೂ ಪರೀಕ್ಷೆಗೆ ದರ ನಿಗದಿ :** ಡೆಂಗ್ಯೂ ಜ್ವರ ಕಂಡುಬಂದ ರೋಗಿಗಳಿಗೆ ಆಸ್ಪತ್ರೆಗಳಲ್ಲಿ ತುರ್ತು ಸ್ಪಂದನೆ ದೊರೆಯಬೇಕು. ರೋಗ ಲಕ್ಷಣ ಆಧರಿಸಿ ಸೂಕ್ತ ಚಿಕಿತ್ಸೆ ನೀಡಬೇಕು. ಎಲ್ಲಾ ಪ್ರಾಥಮಿಕ, ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳು ಹಾಜರಿದ್ದು ರೋಗಿಗಳಿಗೆ ಚಿಕಿತ್ಸೆ ನೀಡಬೇಕು. ಸರ್ಕಾರ ಖಾಸಗಿ ಆಸ್ಪತ್ರೆ ಹಾಗೂ ಲ್ಯಾಬ್‌ಗಳಲ್ಲಿ ಡೆಂಗ್ಯೂ ಪತ್ತೆ ಪರೀಕ್ಷೆಗೆ ಏಕರೂಪ ದರ ನಿಗದಿ ಪಡಿಸಿದೆ. ಇದರ ಆಧಾರದಲ್ಲಿ ಡೆಂಗ್ಯೂ ಎಲಿಸಾ ಎನ್.ಎಸ್.1 ಹಾಗೂ ಎಲಿಸಾ ಐ.ಜಿ.ಎಂ. ಪರೀಕ್ಷೆಗೆ ತಲಾ 300, ಎನ್.ಎಸ್.1, ಐಜಿಎಂ ಮತ್ತು ಐಜಿಜಿ ಯರ್‍ಯಾಪಿಡ್ ಕಾರ್ಡ್ ಪರೀಕ್ಷೆಗೆ ರೂ.250 ಮಾತ್ರ ಪಡೆಯಬೇಕು. ಹೆಚ್ಚಿನ ದರ ವಿಧಿಸುವುದು ಕಂಡುಬಂದರೆ ತಕ್ಷಣವೇ ಅಂತಹ ಖಾಸಗಿ ಆಸ್ಪತ್ರೆ ಹಾಗೂ ಲ್ಯಾಬ್‌ಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ವೆಂಕಟೇಶ್ ಎಚ್ಚರಿಕೆ ನೀಡಿದರು.

**ನಾಲಾ ಸ್ವಚ್ಛತೆಗೆ ಸೂಚನೆ :** ಡೆಂಗ್ಯೂ ಪ್ರಕರಣಗಳು ನಗರ ಪ್ರದೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕಂಡುಬರುತ್ತಿವೆ. ಎಲ್ಲಾ ನಗರ ಸಭೆ, ಪಟ್ಟಣ ಪಂಚಾಯಿತಿ ಹಾಗೂ ಪುರಸಭೆಗಳ ವ್ಯಾಪ್ತಿಯಲ್ಲಿ ನಾಲಾ ಸ್ವಚ್ಛತೆಯನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು. ಇದೇ ಮಾದರಿಯಲ್ಲಿ ಗ್ರಾಮಗಳಲ್ಲಿಯೂ ಚರಂಡಿಗಳ ಸ್ವಚ್ಛತೆ ಕೈಗೊಳ್ಳಬೇಕು. ಡೆಂಗ್ಯೂ ಹರಡುವ ಸೊಳ್ಳೆ ಸ್ವಚ್ಛ ನೀರಿನಲ್ಲಿ ಸಂತಾನೋತ್ಪತ್ತಿ ನಡೆಸುವುದರಿಂದ ಪ್ರತಿ ಮನೆಗಳಿಗೂ ತೆರಳಿ ಜನರಲ್ಲಿ ಜಾಗೃತಿ ಮೂಡಿಸಬೇಕು. ಡೆಂಗ್ಯೂ ಸೊಳ್ಳೆ ಹಗಲಿನಲ್ಲಿ ಕಚ್ಚುತ್ತದೆ. ಆದ್ದರಿಂದ ಹಗಲಿನ ವೇಳೆ ಮಲಗುವ ಅಭ್ಯಾಸ ಇರರುವರು ಸೊಳ್ಳೆ ಪರದೆ ಉಪಯೋಗಿಸುವಂತೆ ತಿಳಿ ಹೇಳಿ. ಡೆಂಗ್ಯೂ ಜಾಗೃತಿ ಕುರಿತು ಆರೋಗ್ಯ ಇಲಾಖೆ ಸಿದ್ದಪಡಿಸಿದ ಜಿಂಗಲ್ಸ್‌ಗಳನ್ನು ಕಸ ಸಂಗ್ರಹಿಸುವ ವಾಹನಗಳಲ್ಲಿ ತಪ್ಪದೇ ಪ್ರಸಾರ ಮಾಡಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಡೆಂಗ್ಯೂ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಹೇಳಿದರು.

ಡೆಂಗ್ಯೂ ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಜೊತೆಗೆ ವಿವಿಧ ಇಲಾಖೆಗಳು ಸಹ ತಪ್ಪದೇ ಕೈಜೋಡಿಸಬೇಕು. ನಗರ ಪ್ರದೇಶ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಆರೋಗ್ಯ ಇಲಾಖೆ ಕೈಗೊಳ್ಳುವ ಲಾರ್ವ ನಾಶದ ಕಾರ್ಯಕ್ರಮಕ್ಕೆ ನಗರ ಸಭೆ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಭಾಗವಹಿಸಬೇಕು. ಗಣಿ ಇಲಾಖೆ ಅಧಿಕಾರಿಗಳು ಕಲ್ಲು ಕ್ವಾರಿಗಳಲ್ಲಿ ಲಾರ್ವ ನಾಶದ ಕಾರ್ಯಕೈಗೊಳ್ಳಬೇಕು. ಎಲ್ಲಿ ಹೆಚ್ಚಿನ ಡೆಂಗ್ಯೂ ಪ್ರಕರಣಗಳು ವರದಿಯಾಗುತ್ತಿವೆಯೇ ಅಂತಹ ಪ್ರದೇಶಗಳಲ್ಲಿ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರಿಂದ ಮನೆ ಮನೆ ಭೇಟಿ ಕಾರ್ಯಕ್ರಮ ಹಮ್ಮಿಕೊಂಡು, ಲಾರ್ವಾ ಸಮೀಕ್ಷೆ ಮತ್ತು ಜ್ವರ ಪೀಡಿತರ ಸಮೀಕ್ಷೆ ನಡೆಸಿ, ವರದಿ ಪಡೆದು ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು. ಮೀನುಗಾರಿಕೆ ಇಲಾಖೆಯಿಂದ ವಾಣಿ ವಿಲಾಸ ಸಾಗರ ಮತ್ಸ್ಯ ಪಾಲನ ಕೇಂದ್ರದಲ್ಲಿ ಸೊಳ್ಳೆ ಲಾರ್ವಾಹಾರಿಗಳಾದ ಗಪ್ಪಿ ಹಾಗೂ ಗಾಂಬೂಸಿಯಾ ಮೀನು ಮರಿಗಳನ್ನು ಉತ್ಪತ್ತಿ ಮಾಡಿ ಆರೋಗ್ಯ ಇಲಾಖೆಗೆ ನೀಡಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಿರ್ದೇಶನ ನೀಡಿದರು.

**ಜಿಲ್ಲೆಯಲ್ಲಿ 275 ಡೆಂಗ್ಯೂ ಪ್ರಕರಣ ಧೃಡ :** ಜಿಲ್ಲೆಯಲ್ಲಿ 2573 ಡೆಂಗ್ಯೂ ಶಂಕಿತ ಪ್ರಕರಣಗಳು ಇದ್ದು, ಇದರಲ್ಲಿ 2033 ಪ್ರಕರಣಗಳಲ್ಲಿ ಡೆಂಗ್ಯೂ ಪರೀಕ್ಷೆ ನಡೆಸಲಾಗಿದೆ. ಜುಲೈ 5 ತಾರೀಖಿನ ಅಂತ್ಯಕ್ಕೆ ಒಟ್ಟು 275 ಡೆಂಗ್ಯೂ ಪ್ರಕರಣಗಳು ಧೃಡಪಟ್ಟಿವೆ. ಡೆಂಗ್ಯೂ ರೋಗಿಗಳಿಗೆ ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ. 2023ರಲ್ಲಿ ಜನವರಿಯಿಂದ ಡಿಸೆಂಬರ್ ವರೆಗೆ ಒಟ್ಟು 377 ಡೆಂಗ್ಯೂ ಪ್ರಕರಣಗಳು ಪತ್ತೆಯಾಗಿದ್ದವು. ಈ ವರ್ಷ 2024ರಲ್ಲಿ ಜುಲೈ ವೇಳೆಗೇ 275 ಪ್ರರಣಗಳು ಧೃಡ ಪಟ್ಟಿರುವುದು ಕಳವಳಕಾರಿಯಾಗಿದೆ. ಚಿತ್ರದುರ್ಗ ತಾಲ್ಲೂಕಿನಲ್ಲಿ 195 ಪ್ರಕರಣಗಳು ಧೃಡಪಟ್ಟಿದ್ದು, ಇದರಲ್ಲಿ 83 ನಗರ ಪ್ರದೇಶದಲ್ಲಿ ಪತ್ತೆಯಾಗಿವೆ. ಉಳಿದ ತಾಲ್ಲೂಕುಗಳ ಪೈಕಿ ಚಳ್ಳಕೆರೆ 32, ಹಿರಿಯೂರು 18, ಹೊಳಲ್ಕೆರೆ 19, ಹೊಸದುರ್ಗ 7ಹಾಗೂಮೊಳಕಾಲ್ಮೂರಿನಲ್ಲಿ 4 ಪ್ರಕರಣಗಳು ಧೃಡಪಟ್ಟಿವೆ ಎಂದು ಮಾಹಿತಿ ನೀಡಿದ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶಿ ಡೆಂಗ್ಯೂ ನಿಯಂತ್ರಣಕ್ಕೆ ವಿವಿಧ ಇಲಾಖೆಗಳು ಕೈಗೊಳ್ಳಬೇಕಾದ ಕಾರ್ಯ ಕುರಿತು ಸಭೆಯಲ್ಲಿ ಪ್ರಾತ್ಯಕ್ಷತೆ ನೀಡಿದರು.

ಜಿ.ಪಂ. ಸಿಇಒ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ನಗರ ಸಭೆ ಆಯುಕ್ತೆ ಎಂ.ರೇಣುಕಾ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಜುಲೈ 20 ರಂದು ದೀಕ್ಷಾ ರಜತ್ ಮಹೋತ್ಸವ

» ಚಿತ್ರದುರ್ಗ

ಪಕ್ಷಾತೀತವಾಗಿ ಸಮಾಜವನ್ನು ಸಂಘಟಿಸಬೇಕು ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್.ರವಿಕುಮಾರ್ ಹೇಳಿದರು.

ನಗರದ ಹೊರವಲಯದಲ್ಲಿರುವ ಭೋವಿ ಗುರುಪೀಠದಲ್ಲಿ ಭಾನುವಾರ ನಡೆದ ದೀಕ್ಷಾ ರಜತ್ ಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಸಮಾಜವನ್ನು ಎಲ್ಲಾ ಪಕ್ಷದ ಸಮಾಜದ ಬಾಂಧವರು ಸೇರಿ ಸಮಾಜ ಸಂಘಟಿಸುವುದರೊಟ್ಟಿಗೆ ಗಿನ್ನೀಸ್ ದಾಖಲೆ ಬರೆಯುವ ರೀತಿ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿಯವರ ದೀಕ್ಷಾ ರಜತ್ ಮಹೋತ್ಸವ ಜುಲೈ 20 ರಂದು ನಡೆಸಬೇಕು ಎಂದು ತಿಳಿಸಿದರು.

ದೀಕ್ಷಾ ರಜತ್ ಮಹೋತ್ಸವವನ್ನು 25 ಬಗೆಯ ಕಿರು ಕಾರ್ಯಕ್ರಮಗಳನ್ನು ಸಂಘಟಿಸಿ ಅರ್ಥಪೂರ್ಣಗೊಳಿಸೋಣ.ಶ್ರೀಗಳುತಾಲ್ಲೂಕು, ಜಿಲ್ಲಾ, ರಾಜ್ಯ, ರಾಷ್ಟ್ರಮಟ್ಟದ ಸಂಘಟನೆಯಾಗಲು ಕಾರಣೀಭೂತರಾಗಿದ್ದಾರೆ. ವಿದ್ಯಾವಂತರು ಸಂಘಟನೆಗೆ ಸಮಯ ನೀಡಬೇಕು ಹಾಗೂ ಸಂಘಟನೆಯ ಭಾಗವಾಗಿ ನಿಲ್ಲಬೇಕು ಎಂದು ಹೇಳಿದರು.ಅಧಿಕಾರಿಗಳು ವೃತ್ತಿಗಂಟಿಕೊಳ್ಳದೆ, ಸ್ವಾರ್ಥಿಗಳಾಗದೇ, ಸಮಷ್ಠಿಯ ಅಭಿವೃದ್ಧಿಗಾಗಿ ನಿಸ್ವಾರ್ಥಿಗಳಾಗಬೇಕು. ಆದಾಯದಲ್ಲಿ ಸ್ವಲ್ಪ ಕುಟುಂಬಕ್ಕೆ, ಸ್ವಲ್ಪ ಸಮಾಜಕ್ಕೆ ಎನ್ನುವ ಭಾವ ಬರಬೇಕು. ರಾಜಕೀಯ ಶಕ್ತಿ ಹೆಚ್ಚಿಸಿಕೊಳ್ಳಬೇಕು, ಇದಕ್ಕೆ ಸಮಾಜದ ಶ್ರೀಗಳು ದಿಕ್ಸೂಚಿಯಾಗಿ ಸಾಗುತ್ತಿದ್ದಾರೆ. ಕೂಲಿ ಕಾರ್ಮಿಕ ಮಕ್ಕಳು ಬಾಲಕಾರ್ಮಿಕರಾಗದೇ ವಿದ್ಯಾವಂತರಾಗಲು ಅವರನ್ನು ಗುರುತಿಸಿ, ಪರಿವರ್ತಿಸಿ ಪ್ರೇರಣೆ ನೀಡಬೇಕು. ಭೋವಿ ನಿಗಮ ಕಟ್ಟ ಕಡೆಯ ಭೋವಿ ವ್ಯಕ್ತಿಯನ್ನು ಮುಖ್ಯ ವಾಹಿನಿಗೆ ತರುವ ಉದ್ದೇಶವನ್ನು ಹೊಂದಿದೆ ಎಂದು ತಿಳಿಸಿದರು.




ಶ್ರೀಗಳು ನಿಶ್ಯಬ್ದದಂತೆ ನೂರಾರು ಮಕ್ಕಳನ್ನು ದತ್ತು ಪಡೆದು ಶೈಕ್ಷಣಿಕ ಹಾಗೂ ಔದ್ಯೋಗಿಕ ಸೇವೆಯನ್ನು ಮಾಡಿದ್ದಾರೆ. ಸಂಚಾರಿ ಮೂರ್ತಿಗಳು ಅವರ ಪರಿಶ್ರಮದಿಂದ ಭೋವಿ ಸಮಾಜ ಸಂಘಟನಾ ಸಮಾಜವಾಗಿ ಹೊರಹೊಮ್ಮಿದೆ. ಸರ್ಕಾರದಲ್ಲಿ ರಾಜಕಾರಣಿಗಳ ಮಾತಿಗಿಂತ ಶ್ರೀಗಳ ಮಾತಿಗೆ ಹೆಚ್ಚು ಮೌಲ್ಯ. ಸಮಾಜಕ್ಕೆ ಸಾಮಾಜಿಕ ನ್ಯಾಯ ದೊರಕಿಸುವಲ್ಲಿ ಶ್ರೀಗಳ ಸಂಘಟನಾ ಶಕ್ತಿ ಪರಿಣಾಮಕಾರಿಯಾಗಿದೆ. ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಸಚಿವರು, ರಾಜಕೀಯ ಪ್ರಮುಖರು, ಶ್ರೀಗಳ ಬಳಿ ಬರುತ್ತಿದ್ದಾರೆ. ಸಮಾಜದ ಋಣ ತೀರಿಸುವ ಪ್ರಯತ್ನದಲ್ಲಿರುವವನೇ ನಿಜವಾದ ಸಮಾಜದ ನಾಯಕ ಎಂದು ಹೇಳಿದರು.

ಶ್ರೀಗಳ ಜೊತೆ ಪ್ರವಾಸದಲ್ಲಿ ಶ್ರೀಗಳ ಸಹನೆ, ತಾಳ್ಮೆ, ಜಾಣ್ಮೆ, ಚಾಕಚಕ್ಯತೆ, ಚುರುಕತೆ ತಿಳಿದುಕೊಂಡಿದ್ದೇನೆ ಹಾಗೂ ಬದುಕಿನಲ್ಲಿ ಅಳವಡಿಸಿಕೊಳ್ಳುವ ಪ್ರಯತ್ನವನ್ನು ಮಾಡುತ್ತಿದ್ದೇನೆ. ಶ್ರೀಗಳಿಗೆ ತನು ಮನ ಧನ ಸೇವೆಗೆ ತಾಮುಂದು, ನಾಮುಂದು ಎಂಬ ಸ್ಪರ್ಧೆಯಲ್ಲಿ ಸೇವೆ ಮಾಡಬೇಕು ಶ್ರೀಮಠದ ಗುರುಕುಲಕ್ಕೆ ಧವಸ ದಾನ್ಯ ನೀಡುವ ಮೂಲಕ ನಮ್ಮ ಮನೆಗೆ ವಹಿಸುವ ಕಾಳಜಿಯಂತೆ ಶ್ರೀಮಠಕ್ಕೂ ನಾವು ಕಾಳಜಿ ವಹಿಸಬೇಕು ಎಂದು ಹೇಳಿದರು.

ಭೋವಿ ಅಭಿವೃದ್ಧಿ ನಿಗಮ ಸುಲಿಗೆ ಕೇಂದ್ರವಲ್ಲ, ಸುಧಾರಣಾ ಕೇಂದ್ರವಾಗಿ ಪರಿವರ್ತಿಸುವೆ. ಸೌಲಭ್ಯ ಪಡೆಯದವರಿಗೆ ಸೌಲಭ್ಯ ಕಲ್ಪಿಸಲಾಗುವುದು, ಬಿ.ಜೆ.ಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಅಧ್ಯಕ್ಷರನ್ನು ನೇಮಕ ಮಾಡಲಿಲ್ಲ, ಅಧಿಕಾರಿಗಳ ದರ್ಪದಿಂದ ನಿಗಮದಲ್ಲಿ ಅವ್ಯವಸ್ಥೆಯಾಗಿದೆ. ಎಸ್.ಐ.ಟಿ ತನಿಖೆಯಿಂದ ಸತ್ಯ ತಿಳಿಯುತ್ತದೆ.

### ವಿದ್ಯಾರ್ಥಿಗಳು ವ್ಯವಹಾರಿಕ ಜ್ಞಾನ ಬೆಳೆಸಿಕೊಳ್ಳಿ: ಬಾಬು ಕುಮಾರ್



» ಚಳ್ಳಕೆರೆ

ವಿದ್ಯಾರ್ಥಿಗಳು ತಮ್ಮ ಶಿಕ್ಷಣ ಜೊತೆ, ಜೊತೆಯಲ್ಲಿ ಪರಿಪಕ್ವವಾದ ವ್ಯವಹಾರಿಕ ಜ್ಞಾನವನ್ನು ಬೆಳೆಸಿಕೊಳ್ಳಬೇಕು. ತಮ್ಮ ಶೈಕ್ಷಣಿಕ ಅವಧಿ ಮುಗಿದ ನಂತರ ಬದುಕನ್ನು ರೂಪಿಸಿಕೊಳ್ಳುವ ಜವಾಬ್ದಾರಿ ಎಲ್ಲರ ಮೇಲಿದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಿಗೆ ದೈನದಿನ ವ್ಯವಹಾರಗಳ ಬಗ್ಗೆ ಜಾಗೃತಿ ಮೂಡಿಸಿ ಆರ್ಥಿಕ ಲಾಭಪಡೆಯುವ ನಿಟ್ಟಿನಲ್ಲಿ ಕಾಲೇಜು ಆವರಣದಲ್ಲಿ ಕೌಶಲ್ಯ ಆಹಾರ ಮೇಳವ'ನ್ನು ನಡೆಸಲಾಗಿದೆ ಎಂದು ಬಾಪೂಜಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಓ.ಬಾಬುಕುಮಾರ್ ತಿಳಿಸಿದರು.ಕಾಲೇಜಿನ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ ಕೌಶಲ್ಯ ಆಹಾರ ಮೇಳವನ್ನು ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳು ಆಹಾರ ಮೇಳದಲ್ಲಿ ಸಂತೋಷದಿಂದ ಪಾಲ್ಗೊಂಡಿದ್ದಾರೆ. ಪೋಷಕರು ಸಹ ಆಗಮಿಸಿ ತಮ್ಮ ಮಕ್ಕಳ ವ್ಯವಹಾರಿಕ ಚಟುವಟಿಕೆ ಬಗ್ಗೆ ಗಮನಹರಿಸುತ್ತಿದ್ದಾರೆ. ಕಾಲೇಜಿನಲ್ಲಿ ಉತ್ತಮ ಬೋಧನೆಯೂ ಸೇರಿದಂತೆ ಎಲ್ಲಾ ಸೌಲಭ್ಯಗಳಿದ್ದು ಇದರ ಸದುಪಯೋಗ ಪಡೆದುಕೊಳ್ಳುವಲ್ಲಿ ವಿದ್ಯಾರ್ಥಿಗಳು ಮುಂದಾಗಬೇಕೆಂದರು. ಪ್ರಾಧ್ಯಾಪಕರಾದ ಡಾ.ಡಿ.ಕರಿಯಣ್ಣ, ಡಾ.ಜಿ.ವಿ.ರಾಜಣ್ಣ, ಎಚ್.ಆರ್.ಮುಜೀಬುಲ್ಲಾ, ಎನ್‌ಎಸ್‌ಎಸ್ ಅಧಿಕಾರಿ ಡಾ.ಜೆ.ತಿಪ್ಪೇಸ್ವಾಮಿ, ಚಂದ್ರಶೇಖರ್, ಆರ್.ಎಸ್.ಉಮೇಶ್, ಬಿ.ಎಂ.ನಂದಿನಿ, ಭಾಗ್ಯಲಕ್ಷ್ಮಿ, ಉಪನ್ಯಾಸಕರಾದ ಮಮತಾ, ತಿಪ್ಪೇಸ್ವಾಮಿ, ಮಧು, ಕೆಂಚಪ್ಪ, ಪ್ರೇಮ, ರಚಿತಾ ಮೊದಲಾದವರು ಇದ್ದರು.

## ಪ್ರಮುಖ ಸುದ್ದಿ

#### ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಸಾಮಾನ್ಯ ಸಭೆ

# ಅಖ್ತರ್ ಸರ್ಕಲ್‌ನಿಂದ ಮಗಾನಹಳ್ಳಿ ರಸ್ತೆಗೆ ಟೆಂಡರ್ ಅಂತಿಮಗೊಳಿಸಿ

» ದಾವಣಗೆರೆ

ದಾವಣಗೆರೆ–ಹರಿಹರ ನಗರಾಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿನ ಅಖ್ತರ್ ರಜ್ವಾ ಸರ್ಕಲ್‌ನಿಂದ ಸರ್ ಮಿರ್ಜಾ ಇಸ್ಮಾಯಿಲ್ ನಗರದ ಮೂಲಕ ಮಗಾನಹಳ್ಳಿ ರಸ್ತೆ ಸಂಪರ್ಕಿಸುವ 120 ಅಡಿ ರಸ್ತೆ ಕಾಮಗಾರಿಯ ಟೆಂಡರ್‌ನ್ನು 15 ದಿನಗಳಲ್ಲಿ ಅಂತಿಮಗೊಳಿಸಿ ಕೆಲಸ ಆರಂಭಿಸುವಂತೆ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಅವರು ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿಯಲ್ಲಿ ನಡೆದ ಪ್ರಾಧಿಕಾರದ ಸಾಮಾನ್ಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. 120 ಅಡಿ ಅಗಲದ ರಸ್ತೆ 300 ಮೀಟರ್ ಮಾತ್ರ ನಿರ್ಮಾಣ ಬಾಕಿ ಇದ್ದು ಇದರಿಂದ ವರ್ತುಲ ರಸ್ತೆಯಲ್ಲಿ ಬರುವ ವಾಹನಗಳಿಗೆ ತೊಂದರೆಯಾಗಿದೆ. ಈ ರಸ್ತೆ ನಿರ್ಮಾಣವಾದಲ್ಲಿ ನಗರದೊಳಗಿನ ವಾಹನ ದಟ್ಟಣೆ ಕಡಿಮೆಯಾಗಲಿದ್ದು ಜನರಿಗೂ ಅನುಕೂಲವಾಗಲಿದೆ ಎಂದು ಸಚಿವರು ತಿಳಿಸಿದರು.



ಈ ವೇಳೆ ಪ್ರಾಧಿಕಾರದ ಅಧಿಕಾರಿಗಳು ತಾಂತ್ರಿಕ ಬಿಡ್ ಪರಿಶೀಲಿಸಿ ಆರ್ಥಿಕ ಬಿಡ್ ತೆರೆಯಲು ಸರ್ಕಾರಕ್ಕೆ ಅನುಮೋದನೆಗೆ ಸಲ್ಲಿಸಲಾಗಿದ್ದು ಸರ್ಕಾರದ ಹಂತದಲ್ಲಿದ್ದು 15 ದಿನಗಳೊಳಗಾಗಿ ಅನುಮೋದನೆ ಪಡೆದು ಕಡಿಮೆ ಬಿಡ್ ಮಾಡಿದ ಗುತ್ತಿಗೆದಾರರಿಗೆ ಸಾಮರ್ಥ್ಯವನ್ನಾಧರಿಸಿ ಟೆಂಡರ್ ಅಂತಿಮಗೊಳಿಸಿ ಕಾಮಗಾರಿ ಪ್ರಾರಂಭಿಸಲಾಗುತ್ತದೆ ಎಂದರು.

ನಗರದ ಪ್ರಮುಖ ರಸ್ತೆ ಮಾರ್ಗಗಳಲ್ಲಿ ನಿವೇಶನಗಳು ಇರುವುದರಿಂದ ಸುಗಮ ಸಂಚಾರಕ್ಕೆ ಸಮಸ್ಯೆಯಾಗಿದ್ದು ಅಂತಹ ಸ್ಥಳಗಳಿಗೆ ಸೂಕ್ತವಾದ ಪರಿಹಾರ ಅಥವಾ ಬದಲಿ ಸ್ವತ್ತನ್ನು ನೀಡಿ ಸ್ವಾಧೀನ ಮಾಡಿಕೊಂಡು ಸಾರ್ವಜನಿಕ ಹಿತದೃಷ್ಟಿಯಿಂದ ಅಭಿವೃದ್ಧಿ ಮಾಡಲು ಸಭೆ ಅನುಮೋದನೆ ನೀಡಿತು.

ಪಿತ್ರಾರ್ಜಿತ ಸ್ವತ್ತುಗಳಿಗೆ ವಿಳಂಬವಿಲ್ಲದೆ ಅನುಮೋದನೆ ನೀಡಿ; ಕುಟುಂಬದ ಆಸ್ತಿಯಲ್ಲಿ ಪಾಲುದಾರಿಕೆಯಡಿ ಚಿಕ್ಕ ಚಿಕ್ಕ 10–5 ಗುಂಟೆಗಳಲ್ಲಿ ನಿವೇಶನ ವಿಂಗಡನೆ ಮಾಡಿಕೊಳ್ಳುವವರಿಗೆ ಅನಾವಶ್ಯಕವಾಗಿ ತೊಂದರೆಯಾಗದಂತೆ ನಿಯಮಬದ್ಧವಾಗಿ ಶೀಘ್ರವಾಗಿ ಅನುಮತಿ ನೀಡಲು ಪ್ರಾಧಿಕಾರದ ಅಧಿಕಾರಿಗಳಿಗೆ ತಿಳಿಸಿದರು.

ಠೇವಣಿಗೆ ಟೆಂಡರ್; ಪ್ರಾಧಿಕಾರದಲ್ಲಿನ ಉಳಿತಾಯದ ಹಣವನ್ನು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಠೇವಣಿಯನ್ನಾಗಿಡಲು ಹೆಚ್ಚು ಬಡ್ಡಿ ನೀಡುವ ಬ್ಯಾಂಕ್‌ಗಳಲ್ಲಿ ಹಣವಿರಿಸಲು ಟೆಂಡರ್ ಮೂಲಕ ಅಂತಿಮಗೊಳಿಸಲು ಸಭೆಯು ಅನುಮೋದನೆ ನೀಡಿತು.

ಸಭೆಯಲ್ಲಿ ಶಾಸಕರಾದ ಕೆ.ಎಸ್.ಬಸವಂತಪ್ಪ, ಬಿ.ಪಿ.ಹರೀಶ್, ವಿಧಾನ ಪರಿಷತ್ ಸದಸ್ಯರಾದ ಅಬ್ದುಲ್ ಜಬ್ಬಾರ್, ಜಿಲ್ಲಾಧಿಕಾರಿ ಹಾಗೂ ಪ್ರಾಧಿಕಾರದ ಅಧ್ಯಕ್ಷರಾದ ಡಾ; ವೆಂಕಟೇಶ್ ಎಂ.ವಿ, ಹೆಚ್ಚುವರಿ ರಕ್ಷಣಾಧಿಕಾರಿ ವಿಜಯಕುಮಾರ್ ಎಂ.ಸಂತೋಷ್, ಪ್ರಾಧಿಕಾರದ ಆಯುಕ್ತರಾದ ಹುಲಿಮನಿ ತಿಮ್ಮಣ್ಣ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T